# 5 set practice question papers

**ಮಾದರಿ ಪ್ರಶ್ನೆ ಪತ್ರಿಕೆ –01**
**ವಿಷಯ : ಪ್ರಥಮ ಭಾಷೆ ಕನ್ನಡ**

**ಸಮಯ: 3.15 ನಿ** **ಗರಿಷ್ಠ ಅಂಕಗಳು: 100**

**I. ಕೆಳಗಿನ ಪ್ರಶ್ನೆಗಳಿಗೆ ಅಥವಾ ಅಪೂರ್ಣ ಹೇಳಿಕೆಗಳಿಗೆ ನಾಲ್ಕು ಆಯ್ಕೆಗಳನ್ನು ನೀಡಲಾಗಿದೆ. ಅವುಗಳಲ್ಲಿ ಹೆಚ್ಚು ಸೂಕ್ತವಾದ ಉತ್ತರವನ್ನು ಆರಿಸಿ ಕ್ರಮಾಕ್ಷರದೊಂದಿಗೆ ಬರೆಯಿರಿ.** 6x1=6

1. **'ತಲೆಗಡರಿ' ಪದವು ಈ ಸಂಧಿಗೆ ಸೇರಿದೆ**
   (ಎ) ಆಗಮ (ಬಿ) ಆದೇಶ
   (ಸಿ) ಗುಣ (ಡಿ) ಲೋಪ
2. **ಅನೇಕ ಉಪವಾಕ್ಯಗಳು ಒಂದು ಪ್ರಧಾನ ವಾಕ್ಯಕ್ಕೆ ಅಧೀನವಾಗಿದ್ದಾಗ ಉಪವಾಕ್ಯಗಳು ಮುಗಿದಾಗಲೆಲ್ಲ ಬಳಸುವ ಲೇಖನ ಚಿಹ್ನೆ**
   (ಎ) ಪೂರ್ಣ ವಿರಾಮ (ಬಿ) ಅಲ್ಪ ವಿರಾಮ
   (ಸಿ) ಅರ್ಧವಿರಾಮ (ಡಿ) ಉದ್ಧರಣ
3. **ಒಂದು ಪೂರ್ಣ ಕ್ರಿಯಾಪದದೊಂದಿಗೆ ಸ್ವತಂತ್ರವಾಗಿರುವ ವಾಕ್ಯ**
   (ಎ) ಸಂಯೋಜಿತ ವಾಕ್ಯ (ಬಿ) ಮಿಶ್ರ ವಾಕ್ಯ
   (ಸಿ) ಸಂಯುಕ್ತ ವಾಕ್ಯ (ಡಿ) ಸಾಮಾನ್ಯ ವಾಕ್ಯ
4. **ದ್ವಿತೀಯ ವಿಭಕ್ತಿಯ ಕಾರಕಾರ್ಥ**
   (ಎ) ಕರಣಾರ್ಥ (ಬಿ) ಕರ್ಮಾರ್ಥ
   (ಸಿ) ಸಂಪ್ರದಾನ ಡಿ) ಅಪಾದಾನ
5. **ಸಂಬಂಧಾರ್ಥಕಾವ್ಯಯಕ್ಕೆ ಉದಾಹರಣೆಯಿದು**
   (ಎ) ನೀನೇ (ಬಿ) ಸಾಕು
   (ಸಿ) ಬೇಗನೆ (ಡಿ) ಆದ್ದರಿಂದ
6. **'ಮಾಡು' ಧಾತುವಿನ ನಿಷೇಧಾರ್ಥಕ ಕ್ರಿಯಾರೂಪ**
   (ಎ) ಮಾಡುವನು (ಬಿ) ಮಾಡನು
   (ಸಿ) ಮಾಡಿಯಾನು (ಡಿ) ಮಾಡೋಣ

**II. ಕೆಳಗಿನವುಗಳಲ್ಲಿ ಮೊದಲೆರಡು ಪದಗಳಿರುವ ಸಂಬಂಧ ದಂತೆ ಮೂರನೆಯ ಪದಕ್ಕೆ ಸರಿಹೊಂದುವ ಸಂಬಂಧೀಪದ ವನ್ನು ಬರೆಯಿರಿ.** 4x1=4

7. ಒಂದೊಂದು : ದ್ವಿರುಕ್ತಿ : : ಸರಸರ : __________
8. ತಲೆನೋವು : ತತ್ಪುರುಷ ಸಮಾಸ : : ಕಳ್ಳಗಿಡಿ : _____
9. ವೈಶಾಖ : ಬೇಸಗೆ : : ತಪಸ್ವಿ : __________
10. ಬಳೆಗಾರ : ತದ್ಧಿತಾಂತನಾಮ : : ಚೆಲುವಿಕೆ : _______

**III. ಕೆಳಗಿನ ಪ್ರತಿಯೊಂದು ಪ್ರಶ್ನೆಗಳಿಗೆ ಒಂದೊಂದು ವಾಕ್ಯದಲ್ಲಿ ಉತ್ತರ ಬರೆಯಿರಿ.** 7x1=7

11. ಹಿತವಚನವು ಮನಸ್ಸಿನ ಕೊಳೆಯನ್ನು ಹೇಗೆ ತೊಳೆಯುತ್ತದೆ?
12. ನೈಮಿತ್ತಿಕನು ಸುಕುಮಾರಸ್ವಾಮಿಯ ಬಗ್ಗೆ ಏನು ಹೇಳಿದನು?
13. ರಾಹಿಲನು ಯಾರು?
14. ಧರ್ಮಬುದ್ಧಿಯು ತನ್ನ ಬೆಳಗಿನ ಹೊತ್ತನ್ನು ಹೇಗೆ ಕಳೆದನು?
15. ನದೀಜಲಗಳು ಏನಾಗಿವೆ?
16. ಛಲವನ್ನೇ ಮೆರೆಯುವುದಾಗಿ ನಿರ್ಧರಿಸಿದವರು ಯಾರು?
17. ಪುಟ್ಟ ಪೋರಿಯ ಅಮ್ಮ ಎಲ್ಲಿ ಮಲಗಿದ್ದಾಳೆ?

**IV. ಕೆಳಗಿನ ಪ್ರಶ್ನೆಗಳಿಗೆ ಮೂರು ಅಥವಾ ನಾಲ್ಕು ವಾಕ್ಯಗಳಲ್ಲಿ ಉತ್ತರ ಬರೆಯಿರಿ.** 10x2=20

18. ಆತಿಥ್ಯ ಸ್ವೀಕರಿಸಿದ ರಾಮ ಲಕ್ಷ್ಮಣರು ಶಬರಿಗೆ ಏನು ಹೇಳಿದರು?
19. ಅರಸ ವೃಷಭಾಂಕನು ಆಶ್ಚರ್ಯಗೊಳ್ಳಲು ಕಾರಣವೇನು?
20. ಶಿಕ್ಷಣದ ಬಗ್ಗೆ ವಿಶ್ವೇಶ್ವರಯ್ಯನವರು ಏನು ಹೇಳಿದ್ದಾರೆ?
21. ಧರ್ಮಬುದ್ಧಿಗೆ ದುಷ್ಟಬುದ್ಧಿ ನೀಡಿದ ಸಲಹೆಗಳಾವುವು?
22. ನಾಳಿನ ಕನಸನ್ನು ಬಿತ್ತಬೇಕಾದರೆ ನಾವು ಹೇಗೆ ಬದುಕ ಬೇಕು ಎಂದು ಕವಿ ಜಿ.ಎಸ್.ಶಿವರುದ್ರಪ್ಪನವರು ಹೇಳಿದ್ದಾರೆ?
23. ಪರಶುರಾಮನು ದ್ರೋಣರಿಗೆ ಮಣ್ಣಿನ ಪಾತ್ರೆಯಲ್ಲಿ ಅರ್ಘ್ಯವನ್ನು ಕೊಡಲು ಕಾರಣವೇನು?
24. 'ಅನ್ ಟು ದಿಸ್ ಲಾಸ್ಟ್' ಕೃತಿ ಗಾಂಧೀಜಿಯವರ ಮೇಲೆ ಯಾವ ಪರಿಣಾಮ ಬೀರಿತು?
25. ಭಗತ್‌ಸಿಂಗ್, ಜಲಿಯನ್ ವಾಲ್‌ಬಾಗ್ ಮಣ್ಣಿನ ಕುರಿತು ತನ್ನ ತಂಗಿಗೆ ಏನೆಂದು ಹೇಳುತ್ತಾನೆ?
26. ಮಲೆನಾಡಿನಲ್ಲಿ ದೀಪದ ಬತ್ತಿಯ ಸಮಸ್ಯೆಯನ್ನು ಹೇಗೆ ಪರಿಹರಿಸಿಕೊಳ್ಳಲಾಯಿತು?
27. ಪೈಗಳ ತಮ್ಮನ ನೂಲು ಮದುವೆಯ ದಿನ ಅಂಗಳದಲ್ಲಿ ಏನೇನು ಸಿದ್ಧತೆಗಳಾಗುತ್ತಿದ್ದವು?

**V. ಕೆಳಗಿನ ಕವಿಗಳ/ಸಾಹಿತಿಗಳ ಜನ್ಮಸ್ಥಳ, ಕಾಲ, ಕೃತಿ ಮತ್ತು ಬಿರುದು/ಪ್ರಶಸ್ತಿಗಳನ್ನು ಕುರಿತು ವಾಕ್ಯರೂಪದಲ್ಲಿ ಬರೆಯಿರಿ.**

28. ಡಿ.ಎಸ್. ಜಯಪ್ಪಗೌಡ 2x3=6
29. ಪಂಪ

**VI. ಕೆಳಗಿನ ಪದ್ಯ ಭಾಗಕ್ಕೆ ಪ್ರಸ್ತಾರ ಹಾಕಿ ಗಣ ವಿಭಾಗ ಮಾಡಿ ಛಂದಸ್ಸಿನ ಹೆಸರನ್ನು ಬರೆಯಿರಿ.** 1x3=3

30. ಮತಿಗೆಟ್ಟು 'ತಸ್ಕರಸ್ಯಾ
    নೃತಂ ಬಲಂ' ಎನಿಪ ವಾಕ್ಯವಂ ನೆನೆಯುತ್ತುಂ

**VII. ಕೆಳಗಿನ ವಾಕ್ಯದಲ್ಲಿರುವ ಅಲಂಕಾರವನ್ನು ಹೆಸರಿಸಿ, ಲಕ್ಷಣ ಬರೆದು, ಸಮನ್ವಯಗೊಳಿಸಿ.** 1x3=3

31. "ಗೀಜುಗನ ಗೂಡುಗಳು ತೊಟ್ಟಿಲುಗಳಂತೆ ತೂಗಾಡುತ್ತಿದ್ದವು"

**VIII. ಕೆಳಗಿನ ಗಾದೆಗಳಲ್ಲಿ ಯಾವುದಾದರೂ ಒಂದನ್ನು ಗಾದೆಯ ಮಹತ್ವದೊಂದಿಗೆ ವಿಸ್ತರಿಸಿ ಬರೆಯಿರಿ.** 1x3=3

32. ಶಕ್ತಿಗಿಂತ ಯುಕ್ತಿ ಮೇಲು
    ಅಥವಾ
    ಕಟ್ಟುವುದು ಕಠಿಣ; ಕೆಡಹುವುದು ಸುಲಭ.

**IX. ಕೆಳಗಿನ ವಾಕ್ಯ ಅಥವಾ ಹೇಳಿಕೆಗಳಿಗೆ ಸಂದರ್ಭ ಮತ್ತು ಸ್ವಾರಸ್ಯಗಳನ್ನು ಬರೆಯಿರಿ.** 6x3=18

33. "ನನ್ನೆದೆಯ ಬಿಡದಲಾ ಈ ಜಗವ ಸುಡದಲಾ"
34. "ಗುರೂಪದೇಶ ಎಂದರೆ ತಲೆನೆರೆಯದೆ ಬರುವ ಮುಪ್ಪು".
35. "ದಯವಿಟ್ಟು ಬಾಗಿಲು ತೆಗೆಯಿರಿ ನಾನು ಗಾಯ ಗೊಂಡಿದ್ದೇನೆ"
36. "ದಂಡ ಬಂದಿತೊ ತಯಾರಾಗಿ ಜಲದ ಮಾಡಿ ಹಲಗಲಿಗಿ"
37. "ಹಸುರತ್ತಲ್ ಹಸುರಿತ್ತಲ್ ಹಸುರೆತ್ತಲ್"
38. "ನೆಲಕಿಜೆವೆನೆಂದು ಬಗೆದಿರೆ ಚಲಕಿಜೆವೆಂ"

**X. ಕೆಳಗಿನ ಪದ್ಯಭಾಗವನ್ನು ಪೂರ್ಣಗೊಳಿಸಿ ಬರೆಯಿರಿ.**

39. 1x4=4

ನೀಲಮೇಘ ______________________

______________________

______________________

______________________

____________ಹಕ್ಕಿ ಹಾರುತಿದೆ ನೋಡಿದಿರಾ?

ಅಥವಾ

ಯುಗ–ಯುಗಗಳ ______________________

______________________

______________________

______________________

____________ಹಕ್ಕಿ ಹಾರುತಿದೆ ನೋಡಿದಿರಾ?

**XI. ಕೆಳಗಿನ ಪದ್ಯಭಾಗವನ್ನು ಓದಿ ಅರ್ಥಮಾಡಿಕೊಂಡು,ಅಡಕವಾಗಿರುವ ಮೌಲ್ಯವನ್ನಾಧರಿಸಿ ಸಾರಾಂಶ ಬರೆಯಿರಿ.** 1x4=4

40. ಬಲ್ಲಗ್ಯ್ಯ ನೃಪರಂಜಿ ತಡೆಯದೆ ರಘೂದ್ವಹನ ।

ಸೊಲ್ಲೇಳಿ ನಮಿಸಲಿಳೆಯೊಳ್ ಚರಿಸುತಧ್ವರದ ।

ನಲ್ಲುದುರೆ ಬಂದು ವಾಲ್ಮೀಕಿಯ ನಿಜಾಶ್ರಮದ ವಿನಿಯೋಗದುಪವನದೊಳು

ಪುಲ್ಲಳ ಪಸುರ್ಗಳಸಿ ಪೊಕ್ಕೊಡಾ ತೋಟಗಾ ।

ವಲ್ಗೆ ತನ್ನೊಡನಾಡಿಗಳ ಕೂಡಿ ಲೀಲೆ ಮಿಗೆ ।

ಬಿಲ್ಗೊಂಡು ನಡೆತಂದವಂ ಕಂಡನರ್ಚಿತ ಸುವಾಜಿಯಂ ವೀರಲವನು ॥

**XII ಕೆಳಗಿನ ಪ್ರಶ್ನೆಗಳಿಗೆ ಎಂಟು ಅಥವಾ ಹತ್ತು ವಾಕ್ಯಗಳಲ್ಲಿ ಉತ್ತರ ಬರೆಯಿರಿ.** 2x4=8

41. 'ವೆಸ್ಟ್ ಮಿನ್‌ಸ್ಟರ್ ಅಬೆ' ಪ್ರಾರ್ಥನಾ ಮಂದಿರದಲ್ಲಿನ 'ಪೊಯೆಟ್ಸ್ ಕಾರ್ನರ್' ಹಾಗೂ 'ರಾಯಲ್ ಚಾಪೆಲ್'ನ ವಿಶೇಷತೆಯನ್ನು ಕುರಿತು ಬರೆಯಿರಿ.

**ಅಥವಾ**

ವೂಲವರ್ಥ ಸ್ಟೇಷನರಿ ಅಂಗಡಿ ಹಾಗೂ ಲಂಡನ್ನಿನಲ್ಲಿ ಹೆಣ್ಣನ್ನು ಸತ್ಕರಿಸುವ ರೀತಿಯನ್ನು ಗೋಕಾಕರು ಹೇಗೆ ವಿವರಿಸಿದ್ದಾರೆ?

42. ಶ್ರೀಕೃಷ್ಣನು ಕರ್ಣನಿಗೆ ಒಡ್ಡಿದ ಆಮಿಷಗಳನ್ನು ನಿಮ್ಮ ಮಾತುಗಳಲ್ಲಿ ಬರೆಯಿರಿ.

**ಅಥವಾ**

ಪಾಂಡವರು ಸೋದರರೆಂದು ತಿಳಿದಾಗ ಕರ್ಣನ ಮನದಲ್ಲಿ ಮೂಡಿದ ಭಾವನೆಗಳನ್ನು ವಿವರಿಸಿ.

**XIII ಕೆಳಗಿನ ಗದ್ಯಭಾಗವನ್ನು ಮನಸ್ಸಿನಲ್ಲಿ ಓದಿಕೊಂಡು, ಕೊಟ್ಟಿರುವ ಪ್ರಶ್ನೆಗಳಿಗೆ ಉತ್ತರ ಬರೆಯಿರಿ.** 1x4=4(2+2)

43. ಹಕ್ಕಿ ಗೂಡಿನಲ್ಲಿ ನೋವಿದೆ, ನಲಿವಿದೆ, ಆಕ್ರಂದನವಿದೆ, ಸಂತಸದ ದನಿಯಿದೆ. ಕಾವು, ಗುಟುಕು ಪಡೆದು ಜೀವ ಕಣ್ತೆರೆವ ಸೃಷ್ಟಿಯ ಅಚ್ಚರಿಯಿದೆ. ಶತ್ರುಗಳ ಬೇಟೆಗೆ ಅಥವಾ ನೈಸರ್ಗಿಕ ವಿಕೋಪಕ್ಕೆ ತುತ್ತಾಗಿರುವ ದಾರುಣವಿದೆ. ಈ ಅವಘಡಗಳನ್ನು ಎದುರಿಸಿ ಬದುಕುವ ಸಾಹಸಗಾಥೆ ಅಲ್ಲಿ ಕಾಣುತ್ತದೆ. ಕೆಲವು ಕೀಟ, ಉರಗ ಸಂತತಿ ಮತ್ತು ಹಲವು ಸಸ್ತನಿಗಳೂ ಗೂಡು ಕಟ್ಟುತ್ತವೆ. ಆದರೆ ಹಕ್ಕಿಗಳಷ್ಟು ಕೌಶಲ್ಯದಿಂದ ಗೂಡು ಕಟ್ಟುವ ಚಾಕಚಕ್ಯತೆ ಬೇರಾವುದಕ್ಕೂ ಬಾರದು. ಹಕ್ಕಿಗಳು ಗೂಡನ್ನು ನಿರ್ಮಿಸುವುದು ಮುಖ್ಯವಾಗಿ ರಕ್ಷಣೆಗಾಗಿ. ಶೀತಗಾಳಿ, ಬಿರುಗಾಳಿ, ಮಳೆ ಪ್ರವಾಹಗಳ ವಿರುದ್ಧ ಬದುಕಲು ಅವುಗಳಿಗೆ ಗೂಡು ಬೇಕು. ಮರುಭೂಮಿಯಂಥ ಪ್ರದೇಶಗಳಲ್ಲಿ ಮರಳಿನ ಹೊಡೆತ, ಪ್ರಖರ ಸೂರ್ಯರಶ್ಮಿ ಮುಂತಾದ ಹವಾಮಾನ ವೈಪರೀತ್ಯಗಳನ್ನು ಪ್ರತಿರೋಧಿಸಲು ಗೂಡು ಬೇಕು. ಮೊಟ್ಟೆ, ಮರಿಗಳನ್ನು ರಕ್ಷಿಸಿಕೊಳ್ಳಲು, ತಮ್ಮನ್ನು ಬೇಟೆಯಾಡುವ ಪ್ರಾಣಿಗಳಿಂದ ತಪ್ಪಿಸಿಕೊಳ್ಳಲು ಎತ್ತರದ ಮರದ ತುದಿ, ಕಣಿವೆ, ಬಿಲ, ದ್ವೀಪ ಅಥವಾ ನೀರಿನ ಮೇಲೆ ಅವು ಗೂಡು ಕಟ್ಟಬೇಕು. ಮೊಟ್ಟೆ ಇಡುವ ಬೆನ್ನು ಮೂಳೆ ಪ್ರಾಣಿಗಳಲ್ಲಿ ಹಕ್ಕಿಗಳೇ ಅತಿಹೆಚ್ಚು ಉಷ್ಣದೇಹಿಗಳು. ಅವುಗಳ ದೇಹದ ಉಷ್ಣತೆಯನ್ನು ಕಾಪಾಡಲು, ಮೊಟ್ಟೆಗಳಿಗೆ ಹಾಗೂ ತುಪ್ಪಳವಿಲ್ಲದ ಮರಿಗಳಿಗೆ ಕಾವು ಕೊಡಲು ಬೆಚ್ಚನೆಯ ಗೂಡು ಬೇಕು. ತಾಯಿ ಗರ್ಭಾಶಯದಲ್ಲಿರುವ ಭ್ರೂಣದಷ್ಟೇ ಗೂಡಿನಲ್ಲಿರುವ ಮೊಟ್ಟೆ ಮರಿಗಳು ಸುರಕ್ಷಿತವಾಗಿರುತ್ತವೆ. ಅದರಿಂದಲೇ 'ಹಕ್ಕಿಗಳಿಗೆ ಗೂಡು ಮಕ್ಕಳಿಗೆ ತಾಯಿ' ಎಂಬ ಗಾದೆ ರೂಢಿಯಲ್ಲಿದೆ. ಗೂಡು ಕಟ್ಟುವಷ್ಟೇ ಅದನ್ನು ಕಟ್ಟುವ ಸ್ಥಳದ ಆಯ್ಕೆ ಹಕ್ಕಿಯ ಬದುಕಿನಲ್ಲಿ ಮಹತ್ವದ ಪಾತ್ರವಹಿಸುತ್ತದೆ. ನಭದಲ್ಲಿ ಹಾರಿ, ಪರ್ವತಗಳನ್ನು ಏರಿ, ಸಾಗರ, ದ್ವೀಪಗಳನ್ನು ದಾಟುವ ಹಕ್ಕಿಗಳು ತಮಗಿರುವ ಅಪೂರ್ವ ಹಾರಾಟ ಶಕ್ತಿಯಿಂದ ಎಲ್ಲೆಂದರಲ್ಲಿ ಗೂಡು ನಿರ್ಮಿಸಬಹುದಾದ ಅನಂತ ಅವಕಾಶಗಳನ್ನು ಪಡೆದಿವೆ. ಸಾಗರದ ದ್ವೀಪ, ಗಿರಿಶಿಖರದ ನೆತ್ತಿ, ಮನುಷ್ಯ ನುಸುಳಲಾರದ ನಿಬಿಡ ವನಶ್ರೇಣಿ, ಸೂರ್ಯನ ಬೆಳಕಿಗೂ ಪ್ರವೇಶ ನಿರಾಕರಿಸುವ ಕಗ್ಗತ್ತಲ ಕಣಿವೆ, ರಕ್ತ ಹೆಪ್ಪುಗಟ್ಟಿಸುವ ಶೀತಲ ಧ್ರುವ ಪ್ರದೇಶ. ಹೀಗೆ ಎಲ್ಲೆಲ್ಲೂ ಅವು ಗೂಡು ಕಟ್ಟಬಲ್ಲವು. ಈ ವಿಚಾರದಲ್ಲಿ ಮಾತ್ರ ಹಕ್ಕಿಯನ್ನು ಬೇರೆ ಯಾವ ಸಂಕುಲವೂ ಮೀರಿಸಲಾರದು.

**ಪ್ರಶ್ನೆಗಳು:**

ಅ) ಹಕ್ಕಿಗಳು ಗೂಡನ್ನು ಎಲ್ಲೆಲ್ಲಿ ಕಟ್ಟಬಲ್ಲವು?

ಆ) ಹಕ್ಕಿಗಳು ಗೂಡನ್ನು ನಿರ್ಮಿಸುವ ಉದ್ದೇಶವೇನು?

**XIV. ಕೆಳಗಿನ ಯಾವುದಾದರೂ ಒಂದಕ್ಕೆ ಕೊಟ್ಟಿರುವ ಮಾಹಿತಿಯನ್ನು ಆಧರಿಸಿ ಪತ್ರ ಬರೆಯಿರಿ.** 1x5=5

44. ನಿಮ್ಮನ್ನು ತೀರ್ಥಹಳ್ಳಿಯ ನಿವಾಸಿ 'ಶೃತಿ' ಎಂದು ಭಾವಿಸಿಕೊಂಡು, ನಿಮ್ಮ ಊರಿಗೆ 'ಶುದ್ಧ ಕುಡಿಯುವ ನೀರಿನ ಘಟಕ'ವನ್ನು ಒದಗಿಸಿಕೊಡುವಂತೆ ಕೋರಿ, ಪುರಸಭೆ ಅಧ್ಯಕ್ಷರಿಗೆ ಮನವಿ ಪತ್ರವನ್ನು ಬರೆಯಿರಿ.

**ಅಥವಾ**

ನಿಮ್ಮನ್ನು ಚಿಕ್ಕಮಗಳೂರಿನ ಸರ್ಕಾರಿ ಪ್ರೌಢಶಾಲೆಯ 'ಸಂದೇಶ್' ಎಂದು ಭಾವಿಸಿಕೊಂಡು, ನೀವು ಕೈಗೊಂಡ ಶೈಕ್ಷಣಿಕ ಪ್ರವಾಸವನ್ನು ವಿವರಿಸಿ, ಬೆಂಗಳೂರಿನ ಜಯನಗರದಲ್ಲಿ ವಾಸವಾಗಿರುವ 'ನಿರಂಜನ' ಎಂಬ ಹೆಸರಿನ ಗೆಳೆಯನಿಗೆ ಪತ್ರ ಬರೆಯಿರಿ.

**XV. ಕೆಳಗಿನ ಯಾವುದಾದರೂ ಒಂದು ವಿಷಯದಲ್ಲಿ ಹದಿನೈದು ವಾಕ್ಯಗಳಿಗೆ ಕಡಿಮೆ ಇಲ್ಲದಂತೆ ಪ್ರಬಂಧ ಬರೆಯಿರಿ.** 1x5=5

45. ಶಾಲಾ ಸಂಸತ್ತಿನ ಕಾರ್ಯಚಟುವಟಿಕೆಗಳು

**ಅಥವಾ**

ಮಹಿಳಾ ಸಬಲೀಕರಣ.

## ಮಾದರಿ ಪ್ರಶ್ನೆ ಪತ್ರಿಕೆ –02

### ವಿಷಯ : ಪ್ರಥಮ ಭಾಷೆ ಕನ್ನಡ

**ಸಮಯ: 3.15 ನಿ** **ಗರಿಷ್ಠ ಅಂಕಗಳು: 100**

**I. ಕೆಳಗಿನ ಪ್ರಶ್ನೆಗಳಿಗೆ ಅಥವಾ ಅಪೂರ್ಣ ಹೇಳಿಕೆಗಳಿಗೆ ನಾಲ್ಕು ಆಯ್ಕೆಗಳನ್ನು ನೀಡಲಾಗಿದೆ. ಅವುಗಳಲ್ಲಿ ಸೂಕ್ತವಾದ ಉತ್ತರವನ್ನು ಆರಿಸಿ ಕ್ರಮಾಕ್ಷರದೊಂದಿಗೆ ಬರೆಯಿರಿ. 6x1=6**

**1. 'ಮೋಸಮಾಡು' ಪದ ಈ ಸಮಾಸಕ್ಕೆ ಉದಾಹರಣೆಯಾಗಿದೆ.**
ಎ) ತತ್ಪುರುಷ ಸಮಾಸ (ಬಿ) ದ್ವಿಗು ಸಮಾಸ
(ಸಿ)ಗಮಕ ಸಮಾಸ (ಡಿ) ಕ್ರಿಯಾ ಸಮಾಸ

**2. ಅನೇಕ ಉಪವಾಕ್ಯಗಳು ಒಂದು ಪ್ರಧಾನ ವಾಕ್ಯಕ್ಕೆ ಅಧೀನವಾಗಿದ್ದಾಗ ಉಪವಾಕ್ಯಗಳು ಮುಗಿದಾಗಲೆಲ್ಲ ಬಳಸುವ ಲೇಖನ ಚಿಹ್ನೆ ಇದು.**
(ಎ) ಉದ್ಧರಣ (ಬಿ) ಅರ್ಧವಿರಾಮ
(ಸಿ) ಅಲ್ಪವಿರಾಮ (ಡಿ) ಭಾವಸೂಚಕ

**3. ಹಳಗನ್ನಡದ ಸಪ್ತಮಿ ವಿಭಕ್ತಿ ಪ್ರತ್ಯಯವಿದು.**
(ಎ) ಇಂದಂ (ಬಿ)ಅನ್ನು
(ಸಿ)ಅತ್ತಣಿಂ (ಡಿ) ಒಳ್

**4. 'ಪಟಪಟ' ಪದ ಈ ಅವ್ಯಯಕ್ಕೆ ಉದಾಹರಣೆ.**
ಎ) ಅನುಕರಣಾವ್ಯಯ (ಬಿ) ಸಾಮಾನ್ಯಾರ್ಥಕಾವ್ಯಯ
(ಸಿ)ಕ್ರಿಯಾರ್ಥಕಾವ್ಯಯ (ಡಿ) ಭಾವಸೂಚಕಾವ್ಯಯ

**5. 'ಸಿಡದ್ಹಾಂಗ' ಪದದ ಗ್ರಾಂಥಿಕ ರೂಪವಿದು.**
(ಎ) ಸಿಡಿದಂತೆ (ಬಿ) ಸಿಡಿದುದು
(ಸಿ)ಸಿಡಿದಹಾಗೆ (ಡಿ) ಸಿಡದಹಾಂಗ

**6. ಇವುಗಳಲ್ಲಿ ನಿಷೇಧಾರ್ಥಕ ಕ್ರಿಯಾರೂಪವಿದು.**
(ಎ) ಮಾಡೀತು (ಬಿ) ಮಾಡದು
(ಸಿ)ಮಾಡಲಿ (ಡಿ) ಮಾಡಿಯಾವು

**II. ಕೆಳಗಿನವುಗಳಲ್ಲಿ ಮೊದಲೆರಡು ಪದಗಳಿಗಿರುವ ಸಂಬಂಧದಂತೆ ಮೂರನೆಯ ಪದಕ್ಕೆ ಸರಿಹೊಂದುವ ಸಂಬಂಧೀ ಪದವನ್ನು ಬರೆಯಿರಿ. 4x1=4**

7. ಕವಿ : ಕಬ್ಬಿಗ : : ದೃಷ್ಟಿ : ________
8. ಯೋಗವಾಹಗಳು : ಎರಡು : : ಅನುನಾಸಿಕಗಳು : ____
9. ಜಾಡ್ಯ : ರೋಗ : : ಮೀಹ : ________
10. ಹಾಲುಗಡಲು : ಆದೇಶಸಂಧಿ : : ತಲೆಗಡರಿ : ______

**III. ಕೆಳಗಿನ ಪ್ರತಿಯೊಂದು ಪ್ರಶ್ನೆಗಳಿಗೆ ಒಂದೊಂದು ವಾಕ್ಯದಲ್ಲಿ ಉತ್ತರ ಬರೆಯಿರಿ. 7x1=7**

11. ಆಂಗ್ಲಸಾಮ್ರಾಜ್ಯದ ವೈಭವ ಕಂಡುಬರುವ ಓಣಿ ಯಾವುದು?
12. ಯಾರ ಕಿವಿಗೆ ಉಪದೇಶ ನಾಟುವುದಿಲ್ಲ?
13. ಸುಕುಮಾರಸ್ವಾಮಿಗೆ ಯಾವ ಪಟ್ಟವನ್ನು ಕಟ್ಟಲಾಯಿತು?
14. ರಾಹಿಲನು ತುರ್ತುಪರಿಸ್ಥಿತಿ ನಿರ್ವಹಣೆಗೆ ಭದ್ರವಾಗಿ ಹಿಡಿದು ಕೊಂಡಿದ್ದೇನು?
15. ನಿಮಗೆ ನಮಸ್ಕರಿಸಿ ಹೋಗಲು ಬಂದೆನಷ್ಟೇ ಎಂದು ದುರ್ಯೊಧನ ಯಾರಿಗೆ ಹೇಳುವನು?
16. ಯಜ್ಞಾಶ್ವವನ್ನು ಕಟ್ಟಿದವರು ಯಾರು?
17. ರಾಜಕೀಯ ಸ್ವಾತಂತ್ರ್ಯದ ಮಹತ್ವವೇನು?

**IV. ಕೆಳಗಿನ ಪ್ರಶ್ನೆಗಳಿಗೆ ಮೂರು ಅಥವಾ ನಾಲ್ಕು ವಾಕ್ಯಗಳಲ್ಲಿ ಉತ್ತರ ಬರೆಯಿರಿ. 10x2=20**

18. ಲಕ್ಷ್ಮಣನು ಅಣ್ಣನನ್ನು ಹೇಗೆ ಸಂತೈಸಿದನು ತಿಳಿಸಿ.
19. ಗುರೂಪದೇಶದ ಗುಣಗಳನ್ನು ಪಟ್ಟಿಮಾಡಿ.
20. ಡಾಕ್ಟರ್‌ಗೆ ವಿಮಾನದ ಪೈಲಟ್ ಏನು ಹೇಳಿದನು?
21. ಧರ್ಮಾಧಿಕರಣರು ವಟವೃಕ್ಷಕ್ಕೆ ಏನು ಹೇಳಿದರು?
22. ಪಾರ್ಥ–ಭೀಮರ ಬಗೆಗೆ ದುರ್ಯೋಧನನ ಅಭಿಪ್ರಾಯವೇನು?
23. ಪರಶುರಾಮನು ಮಣ್ಣಿನ ಪಾತ್ರೆಯಲ್ಲಿ ಅರ್ಘ್ಯವನ್ನು ಕೊಡಲು ಕಾರಣವೇನು?
24. ವಸಂತ ಮುಖ ತೋರಲಿಲ್ಲ ಕವನದಲ್ಲಿ ಪ್ರಕೃತಿಯ ಸಂಭ್ರಮ ಹೇಗೆ ವ್ಯಕ್ತವಾಗಿದೆ?
25. ಭಗತ್‌ಸಿಂಗ್ ಹುತಾತ್ಮರಿಗೆ ಗೌರವ ಸಲ್ಲಿಸಿದ್ದು ಹೇಗೆ?
26. ಸ್ವಾತಂತ್ರ್ಯಪೂರ್ವದಲ್ಲಿ ಹೋರಾಟಗಾರರು ಗಿರಾಕಿಗಳು ಮತ್ತು ಅಂಗಡಿಯವರನ್ನು ಏನೆಂದು ವಿನಂತಿಸಿಕೊಂಡರು?
27. ಪೈಗಳ ತಮ್ಮನ ನೂಲುಮದುವೆಯ ದಿನ ಅಂಗಳದಲ್ಲಿ ಏನೇನು ಸಿದ್ಧತೆಗಳಾಗುತ್ತಿದ್ದವು?

**V. ಕೆಳಗಿನ ಕವಿಗಳ / ಸಾಹಿತಿಗಳ ಜನ್ಮಸ್ಥಳ, ಕಾಲ, ಕೃತಿ ಮತ್ತು ಬಿರುದು / ಪ್ರಶಸ್ತಿಗಳನ್ನು ಕುರಿತು ವಾಕ್ಯರೂಪದಲ್ಲಿ ಬರೆಯಿರಿ. 2x3=6**

28. ಪು.ತಿ. ನರಸಿಂಹಾಚಾರ್
29. ಕುವೆಂಪು

**VI. ಕೆಳಗಿನ ಪದ್ಯಭಾಗಕ್ಕೆ ಪ್ರಸ್ತಾರ ಹಾಕಿ, ಗಣ ವಿಭಾಗ ಮಾಡಿ ಛಂದಸ್ಸಿನ ಹೆಸರನ್ನು ಬರೆಯಿರಿ. 1x3=3**

30. ಅತಿಕುಟಿಲಮನಂ ಧನಲು
ಬ್ಧತೆಯಿಂದಂ ದುಷ್ಟಬುದ್ಧಿ ನುಡಿದಂ ಪುಸಿಯಂ

**VII. ಕೆಳಗಿನ ವಾಕ್ಯದಲ್ಲಿರುವ ಅಲಂಕಾರವನ್ನು ಹೆಸರಿಸಿ. ಲಕ್ಷಣ ಬರೆದು ಸಮನ್ವಯಗೊಳಿಸಿ. 1x3=3**

31. ಸಿಡಿಲು ಸಿಡಿದ್ಹಾಂಗ ಗುಂಡು ಸುರಿದಾವ

**VIII. ಕೆಳಗಿನ ಗಾದೆಗಳಲ್ಲಿ ಯಾವುದಾದರೂ ಒಂದನ್ನು ಗಾದೆಯ ಮಹತ್ವದೊಂದಿಗೆ ವಿಸ್ತರಿಸಿ ಬರೆಯಿರಿ. 1x3=3**

32. ಕೂಡಿ ಬಾಳಿದರೆ ಸ್ವರ್ಗ ಸುಖ
ಅಥವಾ
ಉಪ್ಪಿಗಿಂತ ರುಚಿಯಿಲ್ಲ: ತಾಯಿಗಿಂತ ಬಂಧುವಿಲ್ಲ

**IX. ಕೆಳಗಿನ ವಾಕ್ಯ ಅಥವಾ ಹೇಳಿಕೆಗಳಿಗೆ ಸಂದರ್ಭ ಮತ್ತು ಸ್ವಾರಸ್ಯಗಳನ್ನು ಬರೆಯಿರಿ. 6x3=18**

33. "ನಿಮ್ಮ ದೇಶದ ಗೌರವವನ್ನು ಕಾಯಿರಿ! ಇದು ದೊಡ್ಡದಾದ ರಾಷ್ಟ್ರ "
34. "ರಿಸಿಯರ ರೂಪಂ ಕಾಣ್ಬುಮಂದೀತನುಂ ತಪಂ ಬಡುಗುಮ್"
35. "ಪೊನ್ನನೆಲ್ಲಮಂ ನೀನೆ ಕೊಂಡೆ"
36. "ಸಾರ್ವಭೌಮರಾ ನೆತ್ತಿಯ ಕುಕ್ಕಿ"
37. "ತನ್ನ ಮಾತೆಯಂ ಸರ್ವಜನಮುಂಬಂಜೆಯೆನ್ನದಿರ್ದಪುದೆ"
38. "ನೊಳವಿಂಗೆ ಕುಪ್ಪೆ ವರಂ"

**X. ಕೆಳಗಿನ ಪದ್ಯಭಾಗವನ್ನು ಪೂರ್ಣಗೊಳಿಸಿ ಬರೆಯಿರಿ.**

1 x 4 = 4

39. ಕಲುಷಿತವಾದೀ ________________
________________________
________________________
________________ **ಮುಟ್ಟೋಣ**

**ಅಥವಾ**

ಮತಗಳೆಲ್ಲವೂ ________________
________________________
________________________
________________ **ಬಿತ್ತೋಣ.**

**XI. ಕೆಳಗಿನ ಪದ್ಯಭಾಗವನ್ನು ಓದಿ ಅರ್ಥಮಾಡಿಕೊಂಡು, ಅಡಕವಾಗಿರುವ ಮೌಲ್ಯವನ್ನಾಧರಿಸಿ ಸಾರಾಂಶ ಬರೆಯಿರಿ.**

40. ಮರುಳು ಮಾಧವ ಮಹಿಯ ರಾಜ್ಯದ 1x4=4
ಸಿರಿಗೆ ಸೋಲುವನಲ್ಲ ಕೌಂತೇ
ಯರು ಸುಯೋಧನರೆನಗೆ ಬೆಸಕೈವಲ್ಲಿ ಮನವಿಲ್ಲ
ಹೊರೆದ ದಾತಾರಂಗೆ ಹಗೆವರ
ಶಿರವನರಿದೊಪ್ಪಿಸುವೆನೆಂಬೀ
ಭರದೊಳಿರ್ದೆನು ಕೌರವೇಂದ್ರನ ಕೊಂದೆ ನೀನೆಂದ ।

**XII. ಕೆಳಗಿನ ಪ್ರಶ್ನೆಗಳಿಗೆ ಎಂಟು ಅಥವಾ ಹತ್ತು ವಾಕ್ಯಗಳಲ್ಲಿ ಉತ್ತರ ಬರೆಯಿರಿ.** 2x4=8

41. ನಾಲ್ವಡಿ ಕೃಷ್ಣರಾಜ ಒಡೆಯರ ಕಾಲದಲ್ಲಿ ಮೈಸೂರು 'ಮಾದರಿ ಮೈಸೂರು ರಾಜ್ಯ' ಹೇಗಾಯಿತು? ವಿವರಿಸಿ

**ಅಥವಾ**

ವಿಶ್ವೇಶ್ವರಯ್ಯ ಅವರು ಮೈಸೂರು ದಿವಾನರಾಗಿ ಸಲ್ಲಿಸಿದ ಸೇವೆಯನ್ನು ಕುರಿತು ಬರೆಯಿರಿ.

42. ಹಲಗಲಿ ದಂಗೆಗೆ ಕಾರಣವೇನು? ಸರಕಾರ ಅದನ್ನು ಹೇಗೆ ನಿಯಂತ್ರಿಸಿತು?

**ಅಥವಾ**

ಹಲಗಲಿ ದಂಗೆಯ ಪರಿಣಾಮವೇನು?

**XIII. ಕೆಳಗಿನ ಗದ್ಯಭಾಗವನ್ನು ಮನಸ್ಸಿನಲ್ಲಿ ಓದಿಕೊಂಡು ಕೊಟ್ಟಿರುವ ಪ್ರಶ್ನೆಗಳಿಗೆ ಉತ್ತರ ಬರೆಯಿರಿ.** 1 x 4 = 4 (2 + 2)

ನಮ್ಮ ದೇಶ ನೂರಾರು ವರ್ಷಗಳಿಂದ ಎದುರಿಸುತ್ತಿರುವ ಜಟಿಲಾತಿಜಟಿಲವಾದ ಸಮಸ್ಯೆಗಳನ್ನು ಸಹ ವೈಜ್ಞಾನಿಕ ಮಾರ್ಗಗಳಿಂದ ಪರಿಹರಿಸಲು ಸಾಧ್ಯವಿದೆ. ನಮ್ಮ ಸಮಾಜ ಎದುರಿಸುತ್ತಿರುವ ಜಾತಿಯಂತಹ ಸಾಮಾಜಿಕ ಪಿಡುಗುಗಳ ಪರಿಹಾರವೂ ಸಹ ವಿಜ್ಞಾನ ಮತ್ತು ವೈಜ್ಞಾನಿಕ ಮನೋಭಾವಗಳಿಂದ ಸಾಧ್ಯ. ವಿಶ್ವಮಾನ್ಯತೆಯನ್ನು ಹೊಂದಿದ ವಿಜ್ಞಾನದ ತತ್ವಗಳನ್ನು ಅನ್ವಯಿಸಿಕೊಳ್ಳುವುದರಿಂದ ಮಾನವೀಯ ಮೌಲ್ಯ ಹಾಗೂ ನೀತಿಯಾಧರಿತ ವಿಶ್ವಧರ್ಮ ರೂಪಿತವಾಗಬಲ್ಲದು. ವಿಜ್ಞಾನದ ಯಾವುದೇ ವಿಭಾಗ ಸಮಾಜದ ಒಳಿತಿಗಾಗಿ ನೆರವಾಗಬಲ್ಲದು. ವಿಶೇಷವಾಗಿ ರಸಾಯನಶಾಸ್ತ್ರ ಜೀವನದ ಅನೇಖ ಕ್ಷೇತ್ರಗಳಲ್ಲಿ ಬಳಕೆಯಾಗಿರುವುದು ಕಂಡುಬರುತ್ತದೆ. ರಸಾಯನಿಕ ಕ್ರಿಯೆಗಳಿಲ್ಲದ ಕಾರ್ಯಗಳೇ ಅಪರೂಪ. ವಿಜ್ಞಾನದ ಈ ವಿಭಾಗಗಳಲ್ಲಿ ಆಳವಾದ ಸಂಶೋಧನೆಗಳು ನಡೆದು ಮನುಕುಲದ ಪ್ರಗತಿಗೆ ಕಾರಣೀಭೂತವಾಗಬೇಕಿದೆ. ವಿಜ್ಞಾನಿಗಳು ತಮ್ಮ ಅಮೂಲ್ಯವಾದ ಜ್ಞಾನವನ್ನು ಸಾಮಾನ್ಯ ಜನರ ಮನೋಭಾವನೆಗಳನ್ನು ತಿದ್ದುವ ಕಾರ್ಯದಲ್ಲಿ ತೊಡಗಿಸಿಕೊಳ್ಳಬೇಕು. ಸಮಾಜದ ಸುಧಾರಣೆಗೆ ನೆರವಾಗಬೇಕು. ವಿಜ್ಞಾನಿಗಳು ಹಲವಾರು ಸಂಧರ್ಭಗಳಲ್ಲಿ ಪರಸ್ಪರ ವೈರುಧ್ಯದ ಮನೋಭಾವವನ್ನು ವ್ಯಕ್ತಪಡಿಸುತ್ತಿರುತ್ತಾರೆ. ಅವರು ಪ್ರಯೋಗಶಾಲೆಯಲ್ಲಿ ತಮ್ಮ ಹೆಚ್ಚಿನ ವಿಚಾರ ಶಕ್ತಿಯನ್ನು , ವೈಜ್ಞಾನಿಕ ಮನೋಭಾವನ್ನು ಪ್ರದರ್ಶಿಸುತ್ತಾರೆ. ಆದರೆ ನಿಜ ಜೀವನದಲ್ಲಿ ಅವರ ಯೋಚನಾ ಶಕ್ತಿ ರಜೆ ತೆಗೆದುಕೊಂಡಿದಿಯೋ ಎಂಬಂತೆ ವರ್ತಿಸುತ್ತಾರೆ. ತರಗತಿಯಲ್ಲಿ ಡಾರ್ವಿನನ ಸಿದ್ಧಾಂತವನ್ನು ವೈಜ್ಞಾನಿಕವಾಗಿ ಬೋಧಿಸುತ್ತಾನೆ. ಆದರೆ ಅದೇ ವ್ಯಕ್ತಿ ಗುಡಿ, ಚರ್ಚು, ಮಸೀದಿಗಳಲ್ಲಿ ಯಾವುದೇ ಸಂಕೋಚವಿಲ್ಲದೆ ವಿಜ್ಞಾನಕ್ಕೆ ಅಸಂಗತವಾದ ವಿಕಾಸವಾದವನ್ನು ನಂಬಿಕೆಯ ಮೂಲಕ ಬೋಧಿಸುತ್ತಾನೆ. ಬಹುತೇಕ ವಿಜ್ಞಾನಿಗಳು ಪಾಠ ಹೇಳತ್ತಾ ಹಸ್ತಮುದ್ರಿಕೆಯನ್ನು ನಂಬುವುದು ಉಂಟು.

**ಪ್ರಶ್ನೆಗಳು :**

43. ಅ) ವಿಜ್ಞಾನಿಗಳು ಯಾವ ರೀತಿಯಾಗಿ ವೈರುಧ್ಯ ಭಾವನೆಗಳನ್ನು ವ್ಯಕ್ತಪಡಿಸುತ್ತಿರುತ್ತಾರೆ.?
ಆ) ನೀತಿಯಾಧರಿತ ವಿಶ್ವಧರ್ಮ ಯಾವಾಗ ರೂಪಿತವಾಗಬಲ್ಲದು ?

**XIV. ಕೆಳಗಿನ ಯಾವುದಾದರೂ ಒಂದಕ್ಕೆ ಕೊಟ್ಟಿರುವ ಮಾಹಿತಿಯನ್ನು ಆಧರಿಸಿ ಪತ್ರ ಬರೆಯಿರಿ.** 1x5=5

44. ನಿಮ್ಮನ್ನು ದಾವಣಗೆರೆಯ ಶ್ರೀಭಾರತಮಾತಾ ಪ್ರೌಢಶಾಲೆಯಲ್ಲಿ ಓದುತ್ತಿರುವ ಧನುಷ್ ಎಂದು ಭಾವಿಸಿಕೊಂಡು ನಿಮ್ಮ ಶಾಲೆಯಲ್ಲಿ ನಡೆಯುವ ಕ್ರೀಡಾಕೂಟ ಕಾರ್ಯಕ್ರಮಕ್ಕೆ ಉದ್ಘಾಟಕರಾಗಿ ಆಹ್ವಾನಿಸಿ ನಿಮ್ಮ ಜಿಲ್ಲಾಧಿಕಾರಿಗಳಿಗೊಂದು ಪತ್ರ ಬರೆಯಿರಿ.

**ಅಥವಾ**

ನಿಮ್ಮನ್ನು ಹಾವೇರಿಯ ಶ್ರೀಕನಕದಾಸ ಪ್ರೌಢಶಾಲೆಯಲ್ಲಿ ಓದುತ್ತಿರುವ ಸೃಜನ ಎಂದು ಭಾವಿಸಿಕೊಂಡು ನಿಮ್ಮ ಪರೀಕ್ಷಾ ಸಿದ್ಧತೆಯನ್ನು ಕುರಿತು ಚಿಕ್ಕಬಳ್ಳಾಪುರದಲ್ಲಿರುವ ನಿಮ್ಮ ದೊಡ್ಡಪ್ಪನವರಿಗೆ ಒಂದು ಪತ್ರ ಬರೆಯಿರಿ.

**XV. ಕೆಳಗಿನ ಯಾವುದಾದರೂ ಒಂದು ವಿಷಯದಲ್ಲಿ ಹದಿನೈದು ವಾಕ್ಯಗಳಿಗೆ ಕಡಿಮೆಯಿಲ್ಲದಂತೆ ಪ್ರಬಂಧ ಬರೆಯಿರಿ.**

45. ಗ್ರಂಥಾಲಯಗಳ ಮಹತ್ವ 1x5=5

**ಅಥವಾ**

ಬಾಲ್ಯ ವಿವಾಹ ಒಂದು ಸಾಮಾಜಿಕ ಪಿಡುಗು

**ಮಾದರಿ ಪ್ರಶ್ನೆ ಪತ್ರಿಕೆ –03**

**ವಿಷಯ : ಪ್ರಥಮ ಭಾಷೆ ಕನ್ನಡ**

**ಸಮಯ: 3.15 ನಿ** **ಗರಿಷ್ಠ ಅಂಕಗಳು : 100**

**I. ಕೆಳಗಿನ ಪ್ರಶ್ನೆಗಳಿಗೆ ಅಥವಾ ಅಪೂರ್ಣ ಹೇಳಿಕೆಗಳಿಗೆ ನಾಲ್ಕು ಆಯ್ಕೆಗಳನ್ನು ನೀಡಲಾಗಿದೆ. ಅವುಗಳಲ್ಲಿ ಸೂಕ್ತವಾದ ಉತ್ತರವನ್ನು ಆರಿಸಿ ಕ್ರಮಾಕ್ಷರದೊಂದಿಗೆ ಬರೆಯಿರಿ.** 6 x 1 = 6

**1. ಕನ್ನಡ ವರ್ಣಮಾಲೆಯಲ್ಲಿರುವ ಮಹಾಪ್ರಾಣಾಕ್ಷರಗಳ ಸಂಖ್ಯೆ**
(ಎ) 13 (ಬಿ) 25
(ಸಿ) 05 (ಡಿ) 10

**2. ಒಂದು ಪದವನ್ನೋ ವಾಕ್ಯವನ್ನೋ ಹೇಳಿ ಅದಕ್ಕೆ ಸಮನಾರ್ಥಕ ಪದವನ್ನೋ ವಾಕ್ಯವನ್ನೋ ಹೇಳುವಾಗ ಈ ಚಿಹ್ನೆಯನ್ನು ಬಳಸಲಾಗುತ್ತದೆ.**
(ಎ) ಅಲ್ಪವಿರಾಮ (ಬಿ) ಆವರಣ
(ಸಿ) ಉದ್ಧರಣ (ಡಿ) ಭಾವಸೂಚಕ

**3. 'ಬಿರುಗಾಳಿಗೆ' ಪದದಲ್ಲಿರುವ ವಿಭಕ್ತಿ**
ಎ) ಪ್ರಥಮಾ (ಬಿ) ದ್ವಿತೀಯಾ
(ಸಿ) ಪಂಚಮಿ (ಡಿ) ಚತುರ್ಥಿ

**4. ಒಂದು ಅಥವಾ ಅನೇಕ ವಾಕ್ಯಗಳು ಒಂದು ಪ್ರಧಾನ ವಾಕ್ಯಕ್ಕೆ ಅಧೀನಗಳಾಗಿದ್ದರೆ ಅಂಥ ವಾಕ್ಯವನ್ನು ಹೀಗೆ ಕರೆಯುವರು.**
(ಎ) ಸಾಮಾನ್ಯವಾಕ್ಯ (ಬಿ) ಪ್ರಶ್ನಾರ್ಥಕವಾಕ್ಯ
(ಸಿ) ಮಿಶ್ರವಾಕ್ಯ (ಡಿ) ಸಂಯೋಜಿತವಾಕ್ಯ

**5. ಯಣ್‌ಸಂಧಿಗೆ ಉದಾಹರಣೆಯಾದ ಪದವಿದು**
(ಎ) ಕೋಟ್ಯನುಕೋಟಿ (ಬಿ) ವಾಗ್ದೇವಿ
(ಸಿ) ಏಕೈಕ (ಡಿ) ಸೂರ್ಯೋದಯ

**6. 'ಸಾಕು' ಪದವು ಈ ಅವ್ಯಯಕ್ಕೆ ಉದಾಹರಣೆಯಾಗಿದೆ.**
(ಎ) ಅನುಕರಣ (ಬಿ) ಕ್ರಿಯಾರ್ಥಕ
(ಸಿ) ಸಂಬಂಧಾರ್ಥಕ (ಡಿ) ಅವಧಾರಣಾರ್ಥಕ

**II. ಕೆಳಗಿನವುಗಳಲ್ಲಿ ಮೊದಲೆರಡು ಪದಗಳಿಗಿರುವ ಸಂಬಂಧದಂತೆ ಮೂರನೆಯ ಪದಕ್ಕೆ ಸರಿಹೊಂದುವ ಸಂಬಂಧೀ ಪದವನ್ನು ಬರೆಯಿರಿ.** 4 x 1 = 4

7. ವ್ಯಯ : ಬಿಯ : : ವಂಧ್ಯಾ : ________
8. ಪರ್ವತ : ರೂಢನಾಮ : : ವ್ಯಾಪಾರಿ : ________
9. ನಲ್ಗುದುರೆ : ಕರ್ಮಧಾರಯ : : ತುದಿಬೆರಳು: ________
10. ಧೃತಿ : ಧೈರ್ಯ : : ತಥ್ಯ : ________

**III. ಕೆಳಗಿನ ಪ್ರತಿಯೊಂದು ಪ್ರಶ್ನೆಗಳಿಗೆ ಒಂದೊಂದು ವಾಕ್ಯದಲ್ಲಿ ಉತ್ತರ ಬರೆಯಿರಿ.** 7 x 1 = 7

11. ಶ್ರೀರಾಮನಿಗೆ ಸಮರ್ಪಿಸಲು ಶಬರಿ ಏನನ್ನು ಸಂಗ್ರಹಿಸಿದ್ದಳು?
12. ಯಶೋಭದ್ರೆಯು ರತ್ನ ಕಂಬಳಿಗಳನ್ನು ಯಾರಿಗೆ ಕೊಟ್ಟಳು?
13. ಗಡಿ ಪ್ರದೇಶದಲ್ಲಿ 'ಬ್ಲಾಕ್ ಔಟ್' ನಿಯಮವನ್ನು ಏತಕ್ಕಾಗಿ ಪಾಲಿಸಲಾಗುತ್ತದೆ?
14. ದುಷ್ಟಬುದ್ಧಿಯು ಧರ್ಮಬುದ್ಧಿಯ ಮೇಲೆ ಯಾವ ಆರೋಪವನ್ನು ಹೊರಿಸಿದನು?
15. ಹಕ್ಕಿಯ ಕಣ್ಣುಗಳು ಯಾವುವು?
16. ಅಶ್ವಿನಿ ದೇವತೆಗಳ ವರಬಲದಿಂದ ಜನಿಸಿದವರು ಯಾರು?
17. ಪೆರಿಯಾರ್‌ರವರು ಹುಟ್ಟು ಹಾಕಿದ ಸಂಘಟನೆಯ ಹೆಸರೇನು?

**IV. ಕೆಳಗಿನ ಪ್ರಶ್ನೆಗಳಿಗೆ ಮೂರು ಅಥವಾ ನಾಲ್ಕು ವಾಕ್ಯಗಳಲ್ಲಿ ಉತ್ತರ ಬರೆಯಿರಿ.** 10 x 2 = 20

18. ಪೂಲವರ್ಥ ಅಂಗಡಿಯಲ್ಲಿ ಸಿಗುವ ವಸ್ತುಗಳಾವುವು?
19. ನಾಲ್ವಡಿ ಕೃಷ್ಣರಾಜ ಒಡೆಯರ ಕಾಲದಲ್ಲಿ ಯಾವ ಕ್ಷೇತ್ರಗಳು ಸ್ವಯಂ ಆಡಳಿತ ಕ್ಷೇತ್ರಗಳಾದವು?
20. ಸುಕುಮಾರಸ್ವಾಮಿಯು ಹೇಗೆ ಸುಖಭೋಗಗಳನ್ನು ಅನುಭವಿಸುತ್ತಿದ್ದನು?
21. ಮಹಿಳೆಯ ಆರ್ತನಾದ ಕೇಳಿ ರಾಹಿಲನ ಮನದಲ್ಲಿ ಮೂಡಿದ ಪ್ರಶ್ನೆಗಳಾವುವು?
22. ಹಕ್ಕಿಯ ಹಾರಾಟವನ್ನು ಆಕಾಶಕ್ಕೆ ಹೇಗೆ ಹೋಲಿಸಿದ್ದಾರೆ?
23. ಯಜ್ಞಾಶ್ವದ ಹಣೆಯಲ್ಲಿದ್ದ ಪಟ್ಟಿಯಲ್ಲಿ ಏನೆಂದು ಬರೆಯಲಾಗಿತ್ತು?
24. ಅಂದವಾದ ಬರೆವಣಿಗೆಯ ಬಗ್ಗೆ ಗಾಂಧೀಜಿಯವರ ಅಭಿಪ್ರಾಯವೇನು?
25. ವಸಂತ ಮುಖ ತೋರಲಿಲ್ಲ ಕವನದಲ್ಲಿ ಪ್ರಕೃತಿಯ ಸಂಭ್ರಮ ಹೇಗೆ ವ್ಯಕ್ತವಾಗಿದೆ?
26. ಮಲೆನಾಡಿನಲ್ಲಿ ದೀಪದ ಬತ್ತಿಯ ಸಮಸ್ಯೆಯನ್ನು ಹೇಗೆ ಪರಿಹರಿಸಿಕೊಳ್ಳಲಾಯಿತು?
27. ನೆನಪಿನಲ್ಲಿ ಹಚ್ಚೆ ಚುಚ್ಚಿದಂತಿರುವ ಆ ದಿನದ ಬಗ್ಗೆ ಗೋವಿಂದ ಪೈ ಅವರು ಏನೆಂದು ಹೇಳಿದ್ದಾರೆ?

**V. ಕೆಳಗಿನ ಕವಿಗಳ / ಸಾಹಿತಿಗಳ ಜನ್ಮಸ್ಥಳ, ಕಾಲ, ಕೃತಿ ಮತ್ತು ಬಿರುದು / ಪ್ರಶಸ್ತಿಗಳನ್ನು ಕುರಿತು ವಾಕ್ಯರೂಪದಲ್ಲಿ ಬರೆಯಿರಿ.**

28. ವಿ.ಕೃ.ಗೋಕಾಕ್ . 2 x 3 = 6
29. ಲಕ್ಷ್ಮೀಶ

**VI. ಕೆಳಗಿನ ಪದ್ಯಭಾಗಕ್ಕೆ ಪ್ರಸ್ತಾರ ಹಾಕಿ, ಗಣ ವಿಭಾಗ ಮಾಡಿ ಛಂದಸ್ಸಿನ ಹೆಸರನ್ನು ಬರೆಯಿರಿ.** 1 x 3 = 3

30. ಏನು ಹೇಳ್ವೆ ಕರ್ಣ ಚಿತ್ತ
ಗ್ಲಾನಿ ಯಾವುದು ಮನಕೆ ಕುಂತೀ
ಸೂನುಗಳ ಬೆಸಕೈಸಿಕೊಂಬುದು ಸೇರದೇ ನಿನಗೆ

**VII. ಕೆಳಗಿನ ವಾಕ್ಯದಲ್ಲಿರುವ ಅಲಂಕಾರವನ್ನು ಹೆಸರಿಸಿ, ಲಕ್ಷಣ ಬರೆದು ಸಮನ್ವಯಗೊಳಿಸಿ.** 1 x 3 = 3

31. ಸಜ್ಜನರಿಗೆ ಗುರುವಚನ ಎನ್ನುವುದು ಕಿವಿಗೆ ಒಂದು ಆಭರಣ.

**VIII. ಕೆಳಗಿನ ಗಾದೆಗಳಲ್ಲಿ ಯಾವುದಾದರೂ ಒಂದನ್ನು ಗಾದೆಯ ಮಹತ್ವದೊಂದಿಗೆ ವಿಸ್ತರಿಸಿ ಬರೆಯಿರಿ.** 1 x 3 = 3

32. ಆಳಾಗಬಲ್ಲವನು; ಅರಸಾಗಬಲ್ಲನು

**ಅಥವಾ**

ಕುಂಬಾರನಿಗೆ ವರುಷ ದೊಣ್ಣೆಗೆ ನಿಮಿಷ

**IX. ಕೆಳಗಿನ ವಾಕ್ಯ ಅಥವಾ ಹೇಳಿಕೆಗಳಿಗೆ ಸಂದರ್ಭ ಮತ್ತು ಸ್ವಾರಸ್ಯಗಳನ್ನು ಬರೆಯಿರಿ.** 6 x 3 = 18

33. "ರೂಪಿನಂತೆ ಮಾತು ಕೂಡ ಎನಿತುದಾರವಾಗಿದೆ !"

34. “ಅವರ ಸಾಧನೆಯ ಕಿರೀಟಕ್ಕೆ ಮತ್ತೊಂದು ಗರಿಯನ್ನು ಸೇರಿಸಿತು.”

35. “ಹುಸಿಯದ ಬೇಹಾರಿಯೇ ಇಲ್ಲ”

36. “ಬಾಯ್ದಂಬುಲಕೆ ಕೈಯಾನುವರೆ.”

37. “ಹಸುರು ಹಸುರಿಳೆಯುಸಿರೂ”

38. “ವಿದ್ಯಾಧನಮೆ ಧನಮಪ್ಪುದು”

**X. ಕೆಳಗಿನ ಪದ್ಯಭಾಗವನ್ನು ಪೂರ್ಣಗೊಳಿಸಿ ಬರೆಯಿರಿ.**

39. 1 x 4 = 4

ಕೊಡಲಿ ________________________

________________________

________________________

________________________ ಹೇಳಲಿ ನಾನೆಷ್ಟಾ

**ಅಥವಾ**

ಸಿಕ್ಕದ್ದು ತಗೊಂಡು ________________________

________________________

________________________

________________________ ಹಾಡಿದೆನಣ್ಣಾ ಜನಕಾ

**XI. ಕೆಳಗಿನ ಪದ್ಯಭಾಗವನ್ನು ಓದಿ ಅರ್ಥಮಾಡಿಕೊಂಡು, ಅಡಕವಾಗಿರುವ ಮೌಲ್ಯವನ್ನಾಧರಿಸಿ ಸಾರಾಂಶ ಬರೆಯಿರಿ.**

40. ನೆಲಕಿಜೀವೆನೆಂದು ಬಗೆದಿರೆ। 1 x 4 = 4
ಚಲಕಿಜೀವೆಂ ಪಾಂಡುಸುತರೊಳೀನೆಲನಿದು ಪಾ॥
ಟ್ಟಿಲನೆನಗೆ ದಿನಪಸುತನಂ।
ಕೊಲಿಸಿದ ನೆಲನೊಡನೆ ಮತ್ತೆ ಪುದುವಾಟ್ಟಿಪೆನೇ॥

**XII. ಕೆಳಗಿನ ಪ್ರಶ್ನೆಗಳಿಗೆ ಎಂಟು ಅಥವಾ ಹತ್ತು ವಾಕ್ಯಗಳಲ್ಲಿ ಉತ್ತರ ಬರೆಯಿರಿ.** 2 x 4 = 8

41. ಗುರೂಪದೇಶವನ್ನು ಯಾರ್‍ಯಾರು ಹೇಗೆ ಸ್ವೀಕರಿಸುತ್ತಾರೆ.

**ಅಥವಾ**

ಸಂಪತ್ತಿನ ಗುಣಾವಗುಣಗಳನ್ನು ವಿವರಿಸಿ.

42. ನಾವು ಯಾವ ಸಂಕಲ್ಪ ಕೈಗೊಳ್ಳಬೇಕೆಂಬುದು ಕವಿ ಶಿವರುದ್ರಪ್ಪನವರ ಆಶಯ?

**ಅಥವಾ**

ಸಂಕಲ್ಪ ಮತ್ತು ಅನುಷ್ಠಾನದ ಕುರಿತು ಕವಿ ಶಿವರುದ್ರಪ್ಪನವರ ಅಭಿಪ್ರಾಯವನ್ನು ವಿವರಿಸಿ.

**XIII. ಕೆಳಗಿನ ಗದ್ಯಭಾಗವನ್ನು ಮನಸ್ಸಿನಲ್ಲಿ ಓದಿಕೊಂಡು ಕೊಟ್ಟಿರುವ ಪ್ರಶ್ನೆಗಳಿಗೆ ಉತ್ತರ ಬರೆಯಿರಿ.** 1 x 4 = 4 (2 + 2)

ಕಡಿದಾಳ್ ಮಂಜಪ್ಪನವರ ಕಾಲದಲ್ಲಿ ಮಹಾರಾಜಾ ಕಾಲೇಜು ಸಂಸ್ಕೃತಿ ಮತ್ತು ಜ್ಞಾನದ ದೇಗುಲದಂತಿತ್ತು. ಇಂದಿನಂತೆ ವಿದ್ಯಾರ್ಥಿ ಮತ್ತು ಉಪಾಧ್ಯಾಯರ ಚಳುವಳಿಯಿರಲಿಲ್ಲ. ಕಾಲೇಜಿನ ಶಿಕ್ಷಕ ವರ್ಗದವರು ಅಲ್ಪ ಸಂಬಳ ಬರುತ್ತಿದ್ದರೂ ತಮ್ಮ ವೃತ್ತಿ ಪವಿತ್ರವಾದುದೆಂಬ ತೃಪ್ತಿಯಿಂದ ಕಾರ್ಯನಿರ್ವಹಿಸುತ್ತಿದ್ದರು. ಅವರಲ್ಲಿ ಜ್ಞಾನ ಸಂಪತ್ತಿನ ಜತೆಗೆ ನೈತಿಕ ಸಂಪತ್ತು ಇತ್ತು. ಮಹಾರಾಜಾ ಕಾಲೇಜಿನಲ್ಲಿಯೂ ನನಗೆ ವಿದ್ಯಾರ್ಥಿ ವೇತನ ಲಭ್ಯವಾಗಿತ್ತು. ವಿದ್ಯಾರ್ಥಿ ವೇತನದ ಮೊತ್ತ ತಿಂಗಳಿಗೆ ಹದಿನೆಂಟು ರೂಪಾಯಿ. ವಿದ್ಯಾರ್ಥಿ ವೇತನ ಪಡೆಯುತ್ತಿದ್ದವರಿಗೆ ಕಾಲೇಜಿನ ಶುಲ್ಕವಿರಲಿಲ್ಲ. ಕಾಲೇಜಿನಲ್ಲಿ ಬಿಡುವಿದ್ದಾಗ ಕಡಿದಾಳ ಮಂಜಪ್ಪನವರು ವಾಚನಾಲಯದಲ್ಲಿ ಇದ್ದ ದಿನಪತ್ರಿಕೆಗಳನ್ನು ತಪ್ಪದೆ ಓದುತ್ತಿದ್ದರು. ಮಹಾತ್ಮಾಗಾಂಧಿಯಂತಹ ರಾಷ್ಟ್ರಭಕ್ತರ ಭಾಷಣಗಳೂ, ಲೇಖನಗಳೂ ಅವರ ಮನಸ್ಸಿನ ಮೇಲೆ ಬಹಳ ಪರಿಣಾಮವನ್ನುಂಟು ಮಾಡಿದ್ದವು. ದಿನಪತ್ರಿಕೆಗಳಲ್ಲೂ ವಿಚಾರ ಸಂಕಿರಣಗಳಲ್ಲೂ ರಾಜಕಾರಣ ಮತ್ತು ಅರ್ಥಶಾಸ್ತ್ರಕ್ಕೆ ಸಂಬಂಧಪಟ್ಟ ಲೇಖನಗಳನ್ನು ಓದುತ್ತಿದ್ದರಿಂದ ಪರೀಕ್ಷಾ ವಿಷಯಗಳಾಗಿದ್ದ ರಾಜಕೀಯಶಾಸ್ತ್ರ ಮತ್ತು ಅರ್ಥ ಶಾಸ್ತ್ರಗಳಿಗೆ ಸಂಬಂಧಪಟ್ಟ ವಿಚಾರಗಳು ತಿಳಿಯುತ್ತಿದ್ದವು. ಹೇಗಲ್, ಕ್ಯಾಂಟ್, ವಾಲ್ಟೇರ್, ರೂಸ್ಸೋ ಮುಂತಾದ ದಾರ್ಶನಿಕರ ಕೃತಿಗಳನ್ನೂ ಗ್ರೀಕ್ ಮಹಾಕವಿ ಹೋಮರನ 'ಇಲಿಯಡ್ ಮತ್ತು ಒಡಿಸ್ಸಿ' ಮಹಾಕಾವ್ಯಗಳನ್ನೂ, ಗಿಬ್ಬನ್ನ ಅವರ 'ಉನ್ನತಿ ಮತ್ತು ಅವನತಿ' ಗ್ರಂಥವನ್ನೂ ರವೀಂದ್ರನಾಥ ಟಾಗೋರ, ಬರ್ನಾರ್ಡ್ ಷಾ, ಟಾಲ್‌ಸ್ಟಾಯ್ ಮುಂತಾದವರ ಕೃತಿಗಳನ್ನು ಓದಿರುವುದರಿಂದ ಅವರ ಮನಸ್ಸು ಬಹಳ ವಿಕಾಸಗೊಂಡಿತ್ತು. ಅಂದು ಜ್ಞಾನ ಸಂಪಾದನೆ ವಿದ್ಯಾರ್ಥಿಗಳ ಮುಖ್ಯ ಗುರಿಯಾಗಿದ್ದರೆ; ಇಂದು ಪರೀಕ್ಷೆಯಲ್ಲಿ ಹೇಗಾದರೂ ಮಾಡಿ ಉತ್ತೀರ್ಣರಾಗುವುದು ಗುರಿಯಾಗಿದೆ.

**43. ಪ್ರಶ್ನೆಗಳು**

ಅ) ಕಾಲೇಜಿಗೆ ಬಿಡುವಿದ್ದಾಗ ಮಂಜಪ್ಪ ಅವರು ಅಧ್ಯಯನ ಮಾಡುತ್ತಿದ್ದ ಪ್ರಮುಖ ಗ್ರಂಥಗಳಾವುವು?

ಬ) ಕಡಿದಾಳ ಮಂಜಪ್ಪನವರ ಕಾಲದಲ್ಲಿ ಮಹಾರಾಜ ಕಾಲೇಜಿನ ಶೈಕ್ಷಣಿಕ ವಾತಾವರಣ ಹೇಗಿತ್ತು?

**XIV. ಕೆಳಗಿನ ಯಾವುದಾದರೂ ಒಂದಕ್ಕೆ ಕೊಟ್ಟಿರುವ ಮಾಹಿತಿಯನ್ನು ಆಧರಿಸಿ ಪತ್ರ ಬರೆಯಿರಿ.** 1 x 5 = 5

44. ನಿಮ್ಮನ್ನು ಮಂಗಳೂರಿನ ರಾಣಿಅಬ್ಬಕ್ಕ ಪ್ರೌಢ ಶಾಲೆಯಲ್ಲಿ ಓದಿರುವ ಅರುಣ ಎಂದು ಭಾವಿಸಿಕೊಂಡು ನಿಮ್ಮ ವರ್ಗಾವಣೆ ಪತ್ರ ಮತ್ತು ಅಂಕಪಟ್ಟಿ ಕೋರಿ ಮುಖ್ಯೋಪಾಧ್ಯಯರಿಗೊಂದು ಪತ್ರ ಬರೆಯಿರಿ.

**ಅಥವಾ**

ನಿಮ್ಮನ್ನು ಚಿತ್ರದುರ್ಗದ ಶ್ರೀವೀರಮದಕರಿ ಪ್ರೌಢಶಾಲೆಯಲ್ಲಿ ಓದುತ್ತಿರುವ ಚೈತನ್ಯ ಎಂದು ಭಾವಿಸಿಕೊಂಡು ನಿಮ್ಮ ಶಾಲೆಯಲ್ಲಿ ನಡೆಯುವ ಪ್ರತಿಭಾ ಕಾರಂಜಿ ಕಾರ್ಯಕ್ರಮಕ್ಕೆ ಬರುವಂತೆ ಆಹ್ವಾನಿಸಿ ಮಡಿಕೇರಿಯಲ್ಲಿರುವ ನಿಮ್ಮ ಅಕ್ಕನಿಗೊಂದು ಪತ್ರ ಬರೆಯಿರಿ.

**XV. ಕೆಳಗಿನ ಯಾವುದಾದರೂ ಒಂದು ವಿಷಯದಲ್ಲಿ ಹದಿನೈದು ವಾಕ್ಯಗಳಿಗೆ ಕಡಿಮೆಯಿಲ್ಲದಂತೆ ಪ್ರಬಂಧ ಬರೆಯಿರಿ.**

45. ಕಂಪ್ಯೂಟರ್ ಶಿಕ್ಷಣ. 1 x 5 = 5

**ಅಥವಾ**

ರಾಷ್ಟ್ರೀಯ ಭಾವೈಕ್ಯತೆ

**ಮಾದರಿ ಪ್ರಶ್ನೆ ಪತ್ರಿಕೆ –04**

**ವಿಷಯ : ಪ್ರಥಮ ಭಾಷೆ ಕನ್ನಡ**

**ಸಮಯ: 3.15 ನಿ** **ಗರಿಷ್ಠ ಅಂಕಗಳು: 100**

**I. ಕೆಳಗಿನ ಪ್ರಶ್ನೆಗಳಿಗೆ ಅಥವಾ ಅಪೂರ್ಣ ಹೇಳಿಕೆಗಳಿಗೆ ನಾಲ್ಕು ಆಯ್ಕೆಗಳನ್ನು ನೀಡಲಾಗಿದೆ. ಅವುಗಳಲ್ಲಿ ಸೂಕ್ತವಾದ ಉತ್ತರವನ್ನು ಆರಿಸಿ ಕ್ರಮಾಕ್ಷರದೊಂದಿಗೆ ಬರೆಯಿರಿ.** 6 x 1 = 6

1. **ಎರಡು ಅಥವಾ ಎರಡಕ್ಕಿಂತ ಹೆಚ್ಚು ವ್ಯಂಜನಗಳಿಗೆ ಒಂದು ಸ್ವರ ಸೇರಿ ಆಗುವ ಅಕ್ಷರ ;**
   (ಎ) ದೀರ್ಘಸ್ವರ (ಬಿ) ಹ್ರಸ್ವಸ್ವರ
   (ಸಿ) ಪ್ಲುತಸ್ವರ (ಡಿ) ಸಂಯುಕ್ತಾಕ್ಷರ
2. **ಆತ್ಮಾರ್ಥಕ ಸರ್ವನಾಪ ಪದಕ್ಕೆ ಉದಾಹರಣೆ ;**
   (ಎ) ಪರ್ವತ (ಬಿ) ತಾನು
   (ಸಿ) ಅವನು (ಡಿ) ಯಾರು?
3. **ಚತುರ್ಥಿ ವಿಭಕ್ತಿ ಕಾರಕಾರ್ಥ ;**
   (ಎ) ಕರ್ತ್ರಾರ್ಥ (ಬಿ) ಕರ್ಮಾರ್ಥ
   (ಸಿ) ಸಂಪ್ರದಾನ (ಡಿ) ಕರಣಾರ್ಥ
4. **ಕ್ರಿಯಾರ್ಥಕಾವ್ಯಯವನ್ನು ಸೂಚಿಸುವ ಪದ ;**
   (ಎ) ಚೆನ್ನಾಗಿ (ಬಿ) ಸಾಕು
   (ಸಿ) ಮತ್ತು (ಡಿ) ಅಯ್ಯೋ
5. **ತತ್ಪುರುಷ ಸಮಾಸ ಪದವಿದು ;**
   (ಎ) ದೈವಭಕ್ತಿ (ಬಿ) ಮುಂಗೈ
   (ಸಿ) ಮೇಧಿನಿಪತಿ (ಡಿ) ಹೆದ್ದೊರೆ
6. **'ವಾಚಾಳಿ' ಎಂಬುದು ಈ ವ್ಯಾಕರಣಾಂಶವಾಗಿದೆ.**
   (ಎ) ಕೃದಂತ ನಾಮ (ಬಿ) ತದ್ಧಿತಾಂತ ಭಾವನಾಮ
   (ಸಿ) ಕೃದಂತಾವ್ಯಯ (ಡಿ) ತದ್ಧಿತಾಂತ ನಾಮ

**II. ಕೆಳಗಿನ ಪ್ರಶ್ನೆಗಳಿಗೆ ಮೊದಲೆರಡು ಪದಗಳಿಗಿರುವ ಸಂಬಂಧದಂತೆ ಮೂರನೆಯ ಪದಕ್ಕೆ ಸರಿಹೊಂದುವ ಸಂಬಂಧೀ ಪದವನ್ನು ಬರೆಯಿರಿ.** . 4x1=4

7. ದಿಗಂತ : ಲೋಪಸಂಧಿ : : ಧೃತಿಗೆಟ್ಟು : ________
8. ದೀಪಿಕಾ : ದೀವಿಗೆ : : ಕುಠಾರ : ________
9. ಇಲ್ಲದ್ದಂಗ : ಇಲ್ಲದಹಾಗೆ : : ಇಸವಾಸ : ________
10. ಆರ್ತತೆ : ಬಯಕೆ : : ಕೂರ್ಮೆ : ________

**III. ಕೆಳಗಿನ ಪ್ರಶ್ನೆಗಳಿಗೆ ಪ್ರತಿಯೊಂದಕ್ಕೂ ಒಂದೊಂದು ವಾಕ್ಯದಲ್ಲಿ ಉತ್ತರ ಬರೆಯಿರಿ** 1x7=7

11. ನೆಲ್ಸನ್‌ರವರ ಮೂರ್ತಿಯಿರುವ ಸ್ಥಳದ ಹೆಸರೇನು?
12. ನಾಲ್ವಡಿ ಕೃಷ್ಣರಾಜ ಒಡೆಯರು ಯಾವುದಕ್ಕೆ ಕಂಕಣ ಬದ್ಧರಾಗಿದ್ದರು?
13. ಸುಕುಮಾರಸ್ವಾಮಿಯ ತಂದೆತಾಯಿಗಳ ಹೆಸರೇನು?
14. ಧರ್ಮಾಧಿಕರಣರು ವಟವೃಕ್ಷದ ಸಮೀಪಕ್ಕೆ ಏಕೆ ಬಂದರು?
15. ಹಕ್ಕಿ ಯಾವ ವೇಗದಲ್ಲಿ ಹಾರುತ್ತಿದೆ?
16. ದ್ರೋಣನು ಯಾರೊಡನೆ ಪರಶುರಾಮನ ಬಳಿಗೆ ಬಂದನು?
17. ಜಲಿಯನ್ ವಾಲಾಬಾಗ್ ಘಟನೆ ಯಾವಾಗ ನಡೆಯಿತು?

**IV.ಈ ಕೆಳಗಿನ ಪ್ರಶ್ನೆಗಳಿಗೆ ಮೂರು – ನಾಲ್ಕು ವಾಕ್ಯಗಳಲ್ಲಿ ಉತ್ತರ ಬರೆಯಿರಿ** 10x2=20

18. ಲಂಡನ್ನಿನ ಹೆಣ್ಣು ಮಕ್ಕಳು ಯಾವ ಯಾವ ಕೆಲಸದಲ್ಲಿ ನಿಯುಕ್ತರಾಗಿರುತ್ತಾರೆ?
19. ಸಂಪತ್ತು ಯಾರನ್ನು ಆಶ್ರಯಿಸುತ್ತದೆ?
20. ವೃಷಭಾಂಕ ಅರಸನು ಯಶೋಭದ್ರೆಯ ಅರಮನೆಗೆ ಬರಲು ಕಾರಣವೇನು ?
21. ಮುದುಕಿಯು ರಾಹಿಲನನ್ನು ಸೈನಿಕರಿಂದ ಹೇಗೆ ರಕ್ಷಿಸಿದಳು?
22. ತಾನು ಹೋರಾಡುತ್ತಿರುವುದು ನೆಲಕ್ಕಲ್ಲ ಛಲಕ್ಕೆ ಎಂಬುದನ್ನು ದುರ್ಯೋಧನ ಹೇಗೆ ವಿವರಿಸುತ್ತಾನೆ?
23. ದ್ರೋಣನು ಶಪಥ ಮಾಡುವಾಗ ಹೇಳಿದ ಮಾತುಗಳಾವುವು?
24. ವಿವೇಕಾನಂದರ ದೃಷ್ಟಿಯಲ್ಲಿ ದೇಶದ ಪ್ರಗತಿ ಸ್ಥಿರವಾಗುವುದು ಯಾವಾಗ?
25. ಪುಟ್ಟ ಪೋರಿಯ ಮನೆಯ ಪರಿಸ್ಥಿತಿ ಹೇಗಿದೆ ?
26. ಸ್ವಾತಂತ್ರ್ಯ ಹೋರಾಟಗಾರರು ಕ್ರಿ.ಶ. 1932ರಲ್ಲಿ ವಿನಂತಿಸಿದ್ದ ಪತ್ರದ ಸಾಲುಗಳಲ್ಲಿ ದೇವರ ಪೂಜಾದಿಗಳನ್ನು ಮಾಡುವ ಬಗ್ಗೆ ಏನೆಂದು ವಿನಂತಿಸಿದ್ದಾರೆ?
27. ಹಠಾತ್ತನೆ ಪ್ರಾಸ ಬಿಟ್ಟು ಕವನ ರಚಿಸಿದ ಸಂದರ್ಭವನ್ನು ಕವಿ ಗೋವಿಂದ ಪೈ ಅವರ ಮಾತಿನಲ್ಲಿ ಬರೆಯಿರಿ.

**V. ಕೆಳಗಿನ ಕವಿ/ ಸಾಹಿತಿಗಳ ಸ್ಥಳ, ಕಾಲ, ಕೃತಿ ಮತ್ತು ಪ್ರಶಸ್ತಿ/ಬಿರುದುಗಳನ್ನು ಕುರಿತು ವಾಕ್ಯರೂಪದಲ್ಲಿ ಬರೆಯಿರಿ.**

28. ಬನ್ನಂಜೆ ಗೋವಿಂದಾಚಾರ್ಯ 2x3=6
29. ರನ್ನ

**VI. ಕೆಳಗಿನ ಪದ್ಯಭಾಗಕ್ಕೆ ಪ್ರಸ್ತಾರ ಹಾಕಿ, ಗಣ ವಿಭಾಗ ಮಾಡಿ, ಛಂದಸ್ಸಿನ ಹೆಸರನ್ನು ಬರೆಯಿರಿ.** 1x3=3

**30. ಉರ್ವಿಯೊಳ್ ಕೌಸಲ್ಯೆ ಪಡೆದ ಕುವರಂ ರಾಮ**
ನೂರ್ವನೇ ವೀರನಾತನ ಯಜ್ಞತುರಗಮಿದು
ನಿರ್ವಹಿಸಲಾರ್ಪರಾರಾದೊಡಂ ತಡೆಯಲೆಂದಿರ್ದ ಲೇಖನವನೋದಿ

**VII. ಕೆಳಗಿನ ವಾಕ್ಯದಲ್ಲಿರುವ ಅಲಂಕಾರವನ್ನು ಹೆಸರಿಸಿ, ಲಕ್ಷಣ ಬರೆದು ಸಮನ್ವಯಗೊಳಿಸಿರಿ.** 1x3=3

31. ಮಾತು ಬಲ್ಲವನಿಗೆ ಜಗಳವಿಲ್ಲ; ಊಟ ಬಲ್ಲವನಿಗೆ ರೋಗವಿಲ್ಲ.

**VIII. ಈ ಕೆಳಗೆ ಕೊಟ್ಟಿರುವ ಗಾದೆಗಳಲ್ಲಿ ಯಾವುದಾದರೂ ಒಂದನ್ನು ಗಾದೆಯ ಮಹತ್ವದೊಂದಿಗೆ ವಿಸ್ತರಿಸಿ ಬರೆಯಿರಿ.**

32 "ದೇಶ ಸುತ್ತಿ ನೋಡು ಕೋಶ ಓದಿ ನೋಡು. 1x3=3

**ಅಥವಾ**

ತುಂಬಿದ ಕೊಡ ತುಳುಕುವುದಿಲ್ಲ

**IX. ಕೆಳಗಿನ ವಾಕ್ಯ ಅಥವಾ ಹೇಳಿಕೆಗಳಿಗೆ ಸಂದರ್ಭ ಮತ್ತು ಸ್ವಾರಸ್ಯಗಳನ್ನು ಬರೆಯಿರಿ.** 6x3=18

33. "ತಾವು ಕಡಿಮೆ ಮಾತನಾಡಿದ್ದೀರಿ ; ಹೆಚ್ಚು ಕೆಲಸ ಮಾಡಿದ್ದೀರಿ"
34. "ನಾನಾಕೆಯನ್ನು ಪರೀಕ್ಷಿಸುವೆ, ನೀವು ಬಿಸಿ ನೀರು ಸಿದ್ಧಪಡಿಸಿ."
35. "ನಿನ್ನ ಪಟುವಗೆ ನಮ್ಮ ಕುಲಮನೆಲ್ಲಮನಟಿವ ಬಗೆ"
36. "ಹೊಸಗಾಲದ ಹಸುಮಕ್ಕಳ ಹರಸಿ"
37. "ಎಲ್ಲ ಜನರಿಗೆ ಜೋರ ಮಾಡಿ ಕಸಿದು ಕೊಳ್ಳಿರಿ ಹತಾರ"

38. "ಅರಸುಗಳ ವಾಜಿಯಂ ಬಿಡು"

**X. ಈ ಕೆಳಗಿನ ಪದ್ಯಭಾಗವನ್ನು ಪೂರ್ಣಗೊಳಿಸಿರಿ** 1x4=4

ಹಸುರಾಗಸ; ______________

______________

______________

______________ ಬಿಸಿಲೂ!

**ಅಥವಾ**

ಹೊಸ ______________

______________

______________

______________ಹಸುರಿಳೆಯುಸಿರೂ

**XI. ಕೆಳಗಿನ ಪದ್ಯಭಾಗವನ್ನು ಓದಿ ಅರ್ಥಮಾಡಿಕೊಂಡು, ಅಡಕವಾಗಿರುವ ಮೌಲ್ಯವನ್ನಾಧರಿಸಿ ಸಾರಾಂಶ ಬರೆಯಿರಿ.**

ಮತಗಳೆಲ್ಲವೂ ಪಥಗಳು ಎನ್ನುವ. 1x4=4
ಹೊಸ ಎಚ್ಚರದೊಳು ಬದುಕೋಣ
ಭಯ ಸಂಶಯದೊಳು ಕಂದಿದ ಕಣ್ಣೊಳು
ನಾಳಿನ ಕನಸನು ಬಿತ್ತೋಣ.

**XII. ಕೆಳಗಿನ ಪ್ರಶ್ನೆಗಳಿಗೆ ಎಂಟು ಅಥವಾ ಹತ್ತು ವಾಕ್ಯಗಳಲ್ಲಿ ಉತ್ತರ ಬರೆಯಿರಿ.** 2x4=8

41. ಶಬರಿಯ ಚಿಂತೆ ಹಿಂಗಿ ಹೋದ ಸಂದರ್ಭದ ಸ್ವಾರಸ್ಯವನ್ನು ವಿವರಿಸಿ.

**ಅಥವಾ**

ಶಬರಿಯ ಸಡಗರ, ಸಂತೋಷ ಮೇಳದವರ ಹಾಡಿನಲ್ಲಿ ಹೇಗೆ ವರ್ಣಿತವಾಗಿದೆ?

42. ಕರ್ಣನಿಗೆ ಶ್ರೀಕೃಷ್ಣನು ಒಡ್ಡಿದ ಆಮಿಷಗಳೇನು?

ಅಥವಾ

ಪಾಂಡವರು ಸೋದರರು ಎಂದು ತಿಳಿದಾಗ ಕರ್ಣನ ಮನಸ್ಥಿತಿಯನ್ನು ತಿಳಿಸಿ.

**XIII. ಕೆಳಗಿನ ಗದ್ಯಭಾಗವನ್ನು ಮನಸ್ಸಿನಲ್ಲಿ ಓದಿಕೊಂಡು, ಕೊಟ್ಟಿರುವ ಪ್ರಶ್ನೆಗಳಿಗೆ ಉತ್ತರ ಬರೆಯಿರಿ.** 4=(2+2)

ಜೂನ್ 5ರ 'ವಿಶ್ವ ಪರಿಸರ ದಿನಾಚರಣೆ' ಬಂತೆಂದರೆ ವಿದ್ಯಾರ್ಥಿಗಳೆಲ್ಲ ವಿಶೇಷ ಅಂಭ್ರಮ. ಅಂದು ಏನೆಲ್ಲ ವರ್ಣರಂಜಿತ ಮೆರವಣಿಗೆಗಳು , ಎಷ್ಟೆಲ್ಲ ವೈವಿಧ್ಯಮಯ ಕಾರ್ಯಕ್ರಮಗಳು ನಡೆಯುತ್ತವೆ. ಬೆಂಗಳೂರಿನಲ್ಲಂತೂ ಲಕ್ಷಾಂತರ ವಿದ್ಯಾರ್ಥಿಗಳು ಚಿತ್ರ ವಿಚಿತ್ರ ಮುಖವಾಡಗಳನ್ನು ಧರಿಸಿ ವಾಯುಮಾಲಿನ್ಯದ ವಿರುದ್ಧ ಮೌನಮೆರವಣಿಗೆ ಮಾಡುವುದೇನು; ಸಸ್ಯಸಂಪತ್ತಿನ ರಕ್ಷಣೆಯ ಘೋಷಣೆ ಮಾಡುತ್ತ ಲಾಲ್‌ಬಾಗಿನಿಂದ ಕಬ್ಬನ್ ಪಾರ್ಕ್‌ನವರೆಗೆ ಸಾಲಾಗಿ ಬರುವುದೇನು; ಜಲರಕ್ಷಣೆ ಮಾಡಬೇಕೆಂದು ಒತ್ತಾಯಿಸಿ ವಿಧಾನಸೌಧದಿಂದ ನೀರಿಗಾಗಿ ಓಟ ಮಾಡುವುದೇನು; ಕೆರೆಗಳ ರಕ್ಷಣೆ ಮಾಡಬೇಕೆಂದು ಒತ್ತಾಯಿಸಿ ಸ್ಯಾಂಕಿಟ್ಯಾಂಕ್ ಸುತ್ತ ಮಾನವ ಸರಪಳಿ ನಿರ್ಮಿಸುವುದು. ಕಂಠೀರವ ಕ್ರೀಡಾಂಗಣದಲ್ಲಿ ನೃತ್ಯ ಮಾಡುವುದು, ಕಲಾಪ್ರದರ್ಶನ ಮಾಡುವುದು. ಬೀದಿನಾಟಕ ಮಾಡುವುದು ಹೀಗೆ ಕಳೆದ ಹಲವಾರು ವರ್ಷಗಳಿಂದ ನಡೆಯತ್ತವೆ. ಆದರೂ ನಮ್ಮ ಜನರಿಗೆ ಪರಿಸರ ಕಾಳಜಿಯ ಬಗ್ಗೆ ಇನ್ನೂ ಅರಿವಾಗದಿರುವುದು ಸೋಜಿಗದ ಸಂಗತಿಯಾಗಿದೆ. ಇಂದು ಯುರೋಪ್ , ಅಮೇರಿಕಾ, ಆಸ್ಟ್ರೇಲಿಯಾ, ಜಪಾನಗಳಂತಹ ವಿದೇಶ ರಾಷ್ಟ್ರಗಳಲ್ಲಿ ಹಿಂದೆಂದಿಗಿಂತಲೂ ಹೆಚ್ಚಿನ ಜನಜಾಗೃತಿ ಕಾರ್ಯಕ್ರಮಗಳು ನಡೆಯುತ್ತಿವೆ. ಅಲ್ಲಿನವರು ಹಾಕಿಕೊಳ್ಳುವ ಕಾರ್ಯಗಳು ಕೂಡ ತೀರ ವಿಶಿಷ್ಟವಾಗಿರುತ್ತವೆ. ಗ್ರೀನ್‌ಪೀಸ್‌ನಂಥ ಪೃಥ್ವಿರಕ್ಷಣಾ ಯೋಧರ ದಟ್ಟಹೊಗೆ ಕಾರುವ ಕಾರ್ಖಾನೆಗಳ ಚಿಮಣಿಗಳ ಮೇಲೆ ಹತ್ತಿ ಶುದ್ಧಗಾಳಿ ನಮ್ಮೆಲ್ಲರ ಹಕ್ಕು ಎಂದು ಘೋಷಣೆ ಬರೆಯುತ್ತಾರೆ. ಹೆಮ್ಮರಗಳನ್ನು ಕಡಿದು ಸಾಗಿಸುವ ದಾರಿಗೆ ಅಡ್ಡಲಾಗಿ ಗುಂಡಿತೋಡಿ, ತಮಗೆ ತಾವೇ ಸರಪಳಿ ಬಿಗಿದು ಬೀಗ ಹಾಕಿ ಕೂತು ಬಿಡುತ್ತಾರೆ. ಚರ್ಮಕ್ಕಾಗಿ ಸೀಲ್‌ಪ್ರಾಣಿಗಳನ್ನು ಕೊಲ್ಲಬಾರದೆಂದು ಹಿಮಪ್ರಾಂತ್ಯಕ್ಕೆ ಹೋಗಿ ಸೀಲ್‌ಪ್ರಾಣಿಗಳ ಮೇಲೆ ಎನಾಮಲ್ ಬಣ್ಣಸುರಿದು ಚರ್ಮದ ಅಂದಗೆಡಿಸಿ ಬರುತ್ತಾರೆ. ಕಾರ್ಖಾನೆಗಳು ಸಮುದ್ರದ ಆಳಕ್ಕೆ ಕೊಳೆಯನ್ನು ಬಿಡಬಾರದೆಂದು ಮುಳುಕುವೀರರು ಸಮುದ್ರದ ಆಳಕ್ಕೆ ಹೋಗಿ ಕೊಳವೆಯ ಬಾಯಿಯನ್ನು ಕಟ್ಟಿ ಬರುತ್ತಾರೆ. ಇಂಥಹ ಕೆಚ್ಚೆದೆಯ ಸಾಹಸಗಳಲ್ಲಿ ತೊಡಗಿಕೊಂಡು ಮಾತ್ರ ಪರಿಸರ ರಕ್ಷಣೆ ಮಾಡುತ್ತಾರೆ.

**ಪ್ರಶ್ನೆಗಳು :**

43. ಅ) ವಿದೇಶಗಳಲ್ಲಿ ಪರಿಸರ ಸಂರಕ್ಷಣೆಗಾಗಿ ಯಾವ ರೀತಿ ಸಾಹಸಗಳಲ್ಲಿ ತೊಡಿಗಿಸಿಕೊಳ್ಳುತ್ತಾರೆ ?

ಆ) ವಿಶ್ವ ಪರಿಸರ ದಿನಾಚರಣೆಯಂದು ಬೆಂಗಳೂರಿನಲ್ಲಿ ನಡೆಯುವ ವೈವಿಧ್ಯಮಯ ಕಾರ್ಯಕ್ರಮ ಗಳಾವುವು?

**XIV. ಈ ಕೆಳಗಿನ ಯಾವುದಾದರೂ ಒಂದಕ್ಕೆ ಕೊಟ್ಟಿರುವ ಮಾಹಿತಿಯನ್ನು ಆಧರಿಸಿ ಪತ್ರ ಬರೆಯಿರಿ.** 1x5=5

44. ನಿಮ್ಮನ್ನು ಹಾಸನದ ಶ್ರೀಹೊಯ್ಸಳ ಪ್ರೌಢಶಾಲೆಯಲ್ಲಿ ಓದುತ್ತಿರುವ ರಕ್ಷಿತ ಎಂದು ಭಾವಿಸಿಕೊಂಡು ನಿಮ್ಮ ಶಾಲೆಯಲ್ಲಿ ನಡೆದ ಪ್ರತಿಭಾ ಕಾರಂಜಿ ಕಾರ್ಯಕ್ರಮ ಕುರಿತು ತುಮಕೂರಿನ ಶ್ರೀಸಿದ್ಧಗಂಗ ಮಠದಲ್ಲಿ 10ನೇ ತರಗತಿ ಓದುತ್ತಿರುವ ನಿಮ್ಮ ಸ್ನೇಹಿತ/ತೆಗೊಂದು ಪತ್ರ ಬರೆಯಿರಿ.

**ಅಥವಾ**

ನಿಮ್ಮನ್ನು ಶಿವಮೊಗ್ಗದ ಕುವೆಂಪು ಪ್ರೌಢಶಾಲೆಯಲ್ಲಿ ನಿಮ್ಮನ್ನು ಮಂಡ್ಯದ ಶ್ರೀಕಾವೇರಿ ಪ್ರೌಢಶಾಲೆಯಲ್ಲಿ 10ನೇ ತರಗತಿ ಓದುತ್ತಿರುವ ಸುಮನ ಎಂದು ಭಾವಿಸಿಕೊಂಡು ಕನ್ನಡ ವಿಶ್ವಕೋಶ ಕಳಿಸಿಕೊಡುವಂತೆ ಜ್ಞಾನದೀಪಿಕಾ ಪುಸ್ತಕ ಭಂಡಾರಕ್ಕೆ ಒಂದು ಪತ್ರ ಬರೆಯಿರಿ.

**XV. ಕೆಳಗಿನ ಯಾವುದಾದರೂ ಒಂದು ವಿಷಯದಲ್ಲಿ ಹದಿನೈದು ವಾಕ್ಯಗಳಿಗೆ ಕಡಿಮೆಯಿಲ್ಲದಂತೆ ಪ್ರಬಂಧ ಬರೆಯಿರಿ.**

45. ಸಮೂಹ ಮಾಧ್ಯಮಗಳು. 1x5=5

**ಅಥವಾ**

ಸಾಮಾಜಿಕ ಪಿಡುಗುಗಳು

## ಮಾದರಿ ಪ್ರಶ್ನೆ ಪತ್ರಿಕೆ –05

### ವಿಷಯ : ಪ್ರಥಮ ಭಾಷೆ ಕನ್ನಡ

**ಸಮಯ: 3.15 ನಿ** **ಗರಿಷ್ಠ ಅಂಕಗಳು: 100**

**I. ಕೆಳಗಿನ ಪ್ರಶ್ನೆಗಳಿಗೆ ಅಥವಾ ಅಪೂರ್ಣ ಹೇಳಿಕೆಗಳಿಗೆ ನಾಲ್ಕು ಆಯ್ಕೆಗಳನ್ನು ನೀಡಲಾಗಿದೆ. ಅವುಗಳಲ್ಲಿ ಸೂಕ್ತವಾದ ಉತ್ತರವನ್ನು ಆರಿಸಿ ಕ್ರಮಾಕ್ಷರದೊಂದಿಗೆ ಬರೆಯಿರಿ.** 6 x 1 = 6

1. ' ವಿದ್ವಾಂಸ ' ಎಂಬ ಪದವು ;
   (ಎ) ರೂಢನಾಮ (ಬಿ) ಅಂಕಿತನಾಮ
   (ಸಿ) ಅನ್ವರ್ಥಕ ನಾಮ (ಡಿ) ಸರ್ವನಾಮ
2. **ಇದೊಂದು ಗುಣವಾಚಕ ಪದ ;**
   (ಎ) ಆಟ (ಬಿ) ಅಷ್ಟು
   (ಸಿ) ಅದು (ಡಿ) ಹಳತು
3. **ಮನುಷ್ಯನಲ್ಲಿ – ಈ ನಾಮಪದದಲ್ಲಿರುವ ವಿಭಕ್ತಿ ;**
   (ಎ) ಸಪ್ತಮೀ (ಬಿ) ಪಂಚಮೀ
   (ಸಿ) ಷಷ್ಠೀ (ಡಿ) ಚತುರ್ಥಿ
4. **ವಿಧ್ಯರ್ಥಕ ರೂಪದ ಕ್ರಿಯಾಪದ ;**
   (ಎ) ಓದೆನು (ಬಿ) ಮಾಡೇವು
   (ಸಿ) ಓದಲಿ (ಡಿ) ಓದರು
5. **ಶ್ಚುತ್ವ ಸಂಧಿಗೆ ಉದಾಹರಣೆಯಾಗಿರುವ ಪದ ;**
   (ಎ) ಶರಚ್ಚಂದ್ರ (ಬಿ) ಅಜಂತ
   (ಸಿ) ತನ್ಮಯ (ಡಿ) ಅತ್ಯಾದರ
6. **ಕೃದಂತ ಭಾವನಾಮಕ್ಕೆ ಉದಾಹರಣೆ ;**
   (ಎ) ನಡೆಯುವ (ಬಿ) ಅಂಜಿಕೆ
   (ಸಿ) ಕನ್ನಡತಿ (ಡಿ) ಮಾಡುತ್ತ

**II. ಕೆಳಗಿನ ಪ್ರಶ್ನೆಗಳಿಗೆ ಮೊದಲೆರಡು ಪದಗಳಿಗಿರುವ ಸಂಬಂಧದಂತೆ ಮೂರನೆಯ ಪದಕ್ಕೆ ಸರಿಹೊಂದುವ ಸಂಬಂಧೀ ಪದವನ್ನು ಬರೆಯಿರಿ.** 4x1=4

7. ಹೊಗೆದೋರು : ಕ್ರಿಯಾಸಮಾಸ : : ಘಟಸಂಭೂತ : ____
8. ಮೇಜು : ಪೋರ್ಚುಗೀಸು: : ದಿವಾನ : ____
9. ಸತಿಪತಿ : ಜೋಡುನುಡಿ : : ಈಗೀಗ : ____
10. ಕುಟಿಲ : ಮೋಸ : : ಕಾಪು : ____

**III. ಕೆಳಗಿನ ಪ್ರಶ್ನೆಗಳಿಗೆ ಪ್ರತಿಯೊಂದಕ್ಕೂ ಒಂದೊಂದು ವಾಕ್ಯದಲ್ಲಿ ಉತ್ತರ ಬರೆಯಿರಿ** 1x7=7

11. ಮತಂಗಾಶ್ರಮದಲ್ಲಿ ವಾಸವಿದ್ದ ತಪಸ್ವಿನಿ ಯಾರು?
12. ಲಂಡನ್ನಿನ ರಸ್ತೆಗಳಲ್ಲಿ ಟ್ರಾಮ್ ಬಸ್ಸುಗಳು ಬಹಳ ಹೊತ್ತು ನಡು ನಡುವೆ ನಿಲ್ಲುವುದನ್ನು ತಪ್ಪಿಸಲು ಮಾಡಿರುವ ವ್ಯವಸ್ಥೆಯೇನು?
13. ಹಿತವಚನವು ಮನಸ್ಸಿನ ಕೊಳೆಯನ್ನು ಹೇಗೆ ತೊಳೆಯುತ್ತದೆ?
14. ಅರಸ ವೃಷಭಾಂಕನ ಉಂಗುರವು ಯಾವಾಗ ಕೆಳಕ್ಕೆ ಬಿದ್ದಿತು?
15. ಕಾಡುಮೇಡುಗಳ ಸ್ಥಿತಿ ಹೇಗಿದೆ?
16. ದ್ರೋಣನು ಪರಶುರಾಮರಲ್ಲಿಗೆ ಏಕೆ ಬಂದನು?
17. ಯಾರಿಗೆ ವಸಂತಮುಖ ತೋರಲಿಲ್ಲ?

**IV.ಈ ಕೆಳಗಿನ ಪ್ರಶ್ನೆಗಳಿಗೆ ಮೂರು – ನಾಲ್ಕು ವಾಕ್ಯಗಳಲ್ಲಿ ಉತ್ತರ ಬರೆಯಿರಿ** 10x2=20

18. ರಾಜರ ಪ್ರಕೃತಿ ಹೇಗಿರುತ್ತದೆ?
19. ಹಣಕಾಸು ನೀತಿಯಲ್ಲಿ ವಿಶ್ವೇಶ್ವರಯ್ಯ ಅವರು ಮಾಡಿದ ಮಾರ್ಪಡುಗಳಾವುವು?
20. ವೃಷಭಾಂಕನು ಸುಕುಮಾರಸ್ವಾಮಿಗೆ ವ್ಯಾದಿಯಿದೆ ಎಂದು ಕೊಳ್ಳಲು ಕಾರಣವೇನು?
21. ಮುದುಕಿಯು ರಾಹಿಲನ ಬಳಿ ಯುದ್ಧದ ಬಗ್ಗೆ ತಿರಸ್ಕಾರದಿಂದ ನುಡಿದ ಮಾತುಗಳೇನು?
22. ಕುಂತಿ, ಮಾದ್ರಿಯರು ಯಾರ್‍ಯಾರ ಅನುಗ್ರಹದಿಂದ ಮಕ್ಕಳನ್ನು ಪಡೆದರು?
23. ದ್ರುಪದನು ದ್ರೋಣರಿಗೆ ಗರ್ವದಿಂದ ಹೇಳಿದ ಮಾತುಗಳು ಯಾವುವು?
24. ಕ್ರಿಯಾ ಸ್ವಾತಂತ್ರ್ಯ ಎಂದರೇನು?
25. ಪೈಗಳು ಬರೆದ ಮೊದಲ ಯಕ್ಷಗಾನ ಪ್ರಸಂಗದ ಹೆಸರೇನು?
26. ಮಲೆನಾಡಿನಲ್ಲಿ ದೀಪದ ಬತ್ತಿಯ ಸಮಸ್ಯೆಯನ್ನು ಹೇಗೆ ಪರಿಹರಿಸಿಕೊಳ್ಳಲಾಯಿತು?
27. ಮಂಗಳೂರಿನಲ್ಲಿ ಮರಾಠಿ ನಾಟಕ ಮಂಡಳಿಯವರು ಆಡಿದ ನಾಟಕಗಳು ಗೋವಿಂದ ಪೈ ಅವರ ಮೇಲೆ ಬೀರಿದ ಪರಿಣಾಮವನ್ನು ವಿವರಿಸಿ.

**V. ಕೆಳಗಿನ ಕವಿ/ ಸಾಹಿತಿಗಳ ಸ್ಥಳ, ಕಾಲ, ಕೃತಿ ಮತ್ತು ಪ್ರಶಸ್ತಿ/ ಬಿರುದುಗಳನ್ನು ಕುರಿತು ವಾಕ್ಯರೂಪದಲ್ಲಿ ಬರೆಯಿರಿ.** 2x3=6

28. ಸಾ.ರಾ.ಅಬೂಬಕ್ಕರ್
29. ಕುಮಾರವ್ಯಾಸ

**VI. ಕೆಳಗಿನ ಪದ್ಯಭಾಗಕ್ಕೆ ಪ್ರಸ್ತಾರ ಹಾಕಿ, ಗಣ ವಿಭಾಗ ಮಾಡಿ, ಛಂದಸ್ಸಿನ ಹೆಸರನ್ನು ಬರೆಯಿರಿ.** 1x3=3

30. ತಳವೆಳಗಾಗೆ ಕಟ್ಟಿಸದೆ ಮಾಣ್ದೊಡೆ ಕೆಮ್ಮನೆ ಮೀಸೆವೊತ್ತೆನೇ

**VII. ಕೆಳಗಿನ ವಾಕ್ಯದಲ್ಲಿರುವ ಅಲಂಕಾರವನ್ನು ಹೆಸರಿಸಿ, ಲಕ್ಷಣ ಬರೆದು ಸಮನ್ವಯಗೊಳಿಸಿರಿ.** 1x3=3

31. 'ಆತನು ಪರೀಕ್ಷೆಯಲ್ಲಿ ಪ್ರಥಮಸ್ಥಾನ ಪಡೆದು ಉತ್ತೀರ್ಣನಾದನು. ಬುದ್ಧಿವಂತರಾದ ಮಕ್ಕಳಿಗೆ ಪರೀಕ್ಷೆಯೊಂದು ಲೆಕ್ಕವೇ?'

**VIII. ಈ ಕೆಳಗೆ ಕೊಟ್ಟಿರುವ ಗಾದೆಗಳಲ್ಲಿ ಯಾವುದಾದರೂ ಒಂದನ್ನು ಗಾದೆಯ ಮಹತ್ವದೊಂದಿಗೆ ವಿಸ್ತರಿಸಿ ಬರೆಯಿರಿ.**

32. ಬೆಳೆಯುವ ಸಿರಿ ಮೊಳಕೆಯಲ್ಲಿ. 1x3=3

**ಅಥವಾ**

ಗುಣ ನೋಡಿ ಗೆಳೆತನ ಮಾಡು

**IX. ಕೆಳಗಿನ ವಾಕ್ಯ ಅಥವಾ ಹೇಳಿಕೆಗಳಿಗೆ ಸಂದರ್ಭ ಮತ್ತು ಸ್ವಾರಸ್ಯಗಳನ್ನು ಬರೆಯಿರಿ.** 6x3=18

33. "ನಾಚುತಿಹೆನೀ ಪೂಜ್ಯೆಯೀ ನಲುಮೆಯಿಂದ."
34. "ಹೊತ್ತು! ಹೊತ್ತು !ಹೊತ್ತೇ ಹಣ"
35. "ಸಾಮಾಜಿಕ ಕಾನೂನುಗಳ ಹರಿಕಾರ"
36. "ಮುಂಗಾರಿನ ಮಳೆಯಾಗೋಣ."
37. "ಬೇರೆ ಬಣ್ಣವನೆ ಕಾಣೆ"
38. "ರಘೂದ್ವಹನ ಸೊಲ್ಗೇಳಿ ನಮಿಸಲ್"

**X. ಈ ಕೆಳಗಿನ ಪದ್ಯಭಾಗವನ್ನು ಪೂರ್ಣಗೊಳಿಸಿ** 1x4=4

ನೀಲಮೇಘ ________________
________________________
________________________
________________________
ಹಕ್ಕಿ ಹಾರುತಿದೆ ನೋಡಿದಿರಾ?

**ಅಥವಾ**

ಯುಗ–ಯುಗಗಳ ______________
________________________
________________________
________________________
ಹಕ್ಕಿ ಹಾರುತಿದೆ ನೋಡಿದಿರಾ?

**XI. ಕೆಳಗಿನ ಪದ್ಯಭಾಗವನ್ನು ಓದಿ ಅರ್ಥಮಾಡಿಕೊಂಡು, ಅಡಕವಾಗಿರುವ ಮೌಲ್ಯವನ್ನಾಧರಿಸಿ ಸಾರಾಂಶ ಬರೆಯಿರಿ.** 1x4=4

ಸಿಟ್ಟಿಲಿ ಮುಂಗೈ ಕಟ್ಟನೆ ಕಡಕೊಂಡ, ಹುಕುಮ ಕೊಟ್ಟ ಸಾಹೇಬಾಗ
ಕುದರಿ ಮಂದಿ ಕೂಡಿ ಮುಟ್ಟಿತೊ ಹಲಗಲಿ ತಳದ ಮ್ಯಾಗ
ಒಳಗಿನ ಮಂದಿ ಗುಂಡು ಹೊಡಿದರೊ ಮುಂಗಾರಿ ಸಿಡಿಲ ಸಿಡಿದ್ಹಾಂಗ
ಹೊರಗಿನ ಮಂದಿ ಗುಂಡ ಹತ್ತಿ ಸರಿದು ನಿಂತರೊ ಹಿಡಿದು ದಂಗ
ಕಾಗದ ಬರೆದು ಕಳುವ್ಯಾರೆ ಬೇಗ, ದಂಡು ಬರಲೆಂತ ಹೀಂಗ
ದಂಡ ಬಂದಿತೊ ತಯಾರಾಗಿ ಜಲದ ಮಾಡಿ ಹಲಗಲಿಗಿ

**XII. ಕೆಳಗಿನ ಪ್ರಶ್ನೆಗಳಿಗೆ ಎಂಟು ಅಥವಾ ಹತ್ತು ವಾಕ್ಯಗಳಲ್ಲಿ ಉತ್ತರ ಬರೆಯಿರಿ.** 2x4=8

41. ವೃಕ್ಷ ಸಾಕ್ಷಿ ಪಾಠದಲ್ಲಿ ನೀವು ಮೆಚ್ಚುವ ಪಾತ್ರ ಯಾವುದು? ಏಕೆ?

**ಅಥವಾ**

ದುಷ್ಟಬುದ್ಧಿಯ ತಂತ್ರ ಅವನಿಗೆ ತಿರುಗುಬಾಣವಾದ ಬಗೆಯನ್ನು ತಿಳಿಸಿ.

42. ಭೀಷ್ಮ ಮತ್ತು ದುರ್ಯೋಧನರ ನಡುವಿನ ಸಂಭಾಷಣೆಯ ಸ್ವಾರಸ್ಯವನ್ನು ವಿವರಿಸಿ.

**ಅಥವಾ**

ದುರ್ಯೋಧನನ ಛಲದ ಗುಣ ಅವನ ಮಾತುಗಳಲ್ಲಿ ವ್ಯಕ್ತವಾಗಿರುವ ಬಗೆಯನ್ನು ವಿವರಿಸಿ.

**XIII. ಕೆಳಗಿನ ಗದ್ಯಭಾಗವನ್ನು ಮನಸ್ಸಿನಲ್ಲಿ ಓದಿಕೊಂಡು, ಕೊಟ್ಟಿರುವ ಪ್ರಶ್ನೆಗಳಿಗೆ ಉತ್ತರ ಬರೆಯಿರಿ.** 4=(2+2)

ರೈತರನ್ನು **'ಅನ್ನದಾತ'** ದೇಶದ **'ಬೆನ್ನೆಲುಬು'** ಎಂದೆಲ್ಲ ಕರೆಯುತ್ತೇವೆ. ಆದರೆ ಇಂದು ರೈತರ ಪರಿಸ್ಥಿತಿ ಚಿಂತಾಜನಕವಾಗಿದೆ. ನಿಸರ್ಗದ ಜೊತೆ ಸೆಣೆಸಬೇಕು. ಸಕಾಲಕ್ಕೆ ಸರಿಯಾಗಿ ಮಳೆ ಬರುವುದಿಲ್ಲ. ಉತ್ತಮ ಗುಣಮಟ್ಟದ ಬೀಜ ಗೊಬ್ಬರದ ಸಮಸ್ಯೆಯಿಂದ ಭೂಮಿ ಬರಿದಾಗುತ್ತಿದೆ. ಕ್ರಿಮಿಕೀಟಗಳ ಹಾವಳಿಯಿಂದ ಬೆಳೆಗೆ ರೋಗಗಳು ತಗುಲಿ ಬೆಳೆ ಸಿಗದ ಸಮಸ್ಯೆ, ಬೆಳೆ ಬೆಳೆದರೂ ಸರಿಯಾದ ಬೆಲೆ ಸಿಗದೆ ರೈತರು ಸಾಕಷ್ಟು ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ವ್ಯವಸಾಯ ಇಲ್ಲದಿದ್ದರೆ ದೇಶದ ಆಟವೇ ನಡೆಯದು. ಕೃಷಿಕರು ಭೂಮಿಯನ್ನು ಉಳುವುದಿಲ್ಲ ಎಂದು ಸತ್ಯಾಗ್ರಹ ಮಾಡಿದರೆ, ಜನರು ಆಹಾರವಿಲ್ಲದೆ ಸಾಯುವ ಪರಿಸ್ಥಿತಿ ಬರುತ್ತದೆ. ದೇಶದ ಅಭಿವೃದ್ಧಿ ಕುಂಠಿತವಾಗುತ್ತದೆ. ಗೆಡ್ಡೆ–ಗೆಣಸುಗಳನ್ನು ತಿಂದು, ಎಲೆಗಳ ರಸ ಕುಡಿದು ಬದುಕುವ ಕಾಲ ಮತ್ತೆ ಬರಬಹುದು. ಆಹಾರಕ್ಕಾಗಿ ಮನುಷ್ಯರು ಮತ್ತು ಪ್ರಾಣಿಗಳ ನಡುವೆ ಹೋರಾಟ ಏರ್ಪಡಬಹುದು. ಆಹಾರವಿಲ್ಲದೆ ಬದುಕಲು ಸಾಧ್ಯವಿಲ್ಲ. ಅಕ್ಕಿ, ರಾಗಿ, ಗೋಧಿ, ಜೋಳ ತರಕಾರಿಗಳನ್ನು ತಯಾರಿಸುವ ಯಾವ ಕಾರ್ಖಾನೆಗಳು ಇಲ್ಲ. ಇವಕ್ಕೆಲ್ಲ ರೈತರ ಬೆವರು ಭೂಮಿಗೆ ಸುರಿಯಬೇಕು.

**ಪ್ರಶ್ನೆಗಳು :**

43. ಅ) ರೈತರು ಎದುರಿಸುತ್ತಿರುವ ಸಮಸ್ಯೆಗಳಾವುವು?
ಆ) ಕೃಷಿಕರು ಭೂಮಿಯನ್ನು ಉಳುವುದಿಲ್ಲ ಎಂದು ಸತ್ಯಾಗ್ರಹ ಮಾಡಿದರೆ ಏನಾಗಬಹುದು?

**XIV. ಈ ಕೆಳಗಿನ ಯಾವುದಾದರೂ ಒಂದಕ್ಕೆ ಕೊಟ್ಟಿರುವ ಮಾಹಿತಿಯನ್ನು ಆಧರಿಸಿ ಪತ್ರ ಬರೆಯಿರಿ.** 1x5=5

44. ನಿಮ್ಮನ್ನು ಮೈಸೂರಿನ ಶ್ರೀವಿವೇಕಾನಂದ ಪ್ರೌಢ ಶಾಲೆಯಲ್ಲಿ ಓದುತ್ತಿರುವ ನಂದನ ಎಂದು ಭಾವಿಸಿಕೊಂಡು ನಿಮ್ಮ ಶಾಲೆಯಲ್ಲಿ ನಡೆಯುವ ಶಾಲಾ ಸ್ವಾತಂತ್ರ್ಯ ದಿನಾಚರಣೆಗೆ ಬರುವಂತೆ ಆಹ್ವಾನಿಸಿ ಬಳ್ಳಾರಿಯಲ್ಲಿರುವ ನಿಮ್ಮ ತಾಯಿಗೊಂದು ಪತ್ರ ಬರೆಯಿರಿ.

**ಅಥವಾ**

ನಿಮ್ಮನ್ನು ಬಿಜಾಪುರದ ಗೋಳಗೊಮ್ಮಟ ಪ್ರೌಢ ಶಾಲೆಯಲ್ಲಿ ಓದುತ್ತಿರುವ ಮಧು ಎಂದು ಭಾವಿಸಿಕೊಂಡು ನಿಮ್ಮ ಊರಿಗೊಂದು ಗ್ರಂಥಾಲಯ ನಿರ್ಮಿಸಿಕೊಡುವಂತೆ ನಿಮ್ಮ ರಾಜ್ಯದ ಶಿಕ್ಷಣ ಸಚಿವರಿಗೊಂದು ಮನವಿ ಪತ್ರ ಬರೆಯಿರಿ.

**XV. ಕೆಳಗಿನ ಯಾವುದಾದರೂ ಒಂದು ವಿಷಯದಲ್ಲಿ ಹದಿನೈದು ವಾಕ್ಯಗಳಿಗೆ ಕಡಿಮೆಯಿಲ್ಲದಂತೆ ಪ್ರಬಂಧ ಬರೆಯಿರಿ.** 1x5=5

45. ತ್ಯಾಜ್ಯವಸ್ತು ನಿರ್ವಹಣೆ

**ಅಥವಾ**

ದೂರದರ್ಶನದ ಒಳಿತು–ಕೆಡುಕುಗಳು